# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 62 | WEDNESDAY 13-05-2026 | PRGI No : KNKAN/26/A0962 | Pages:4 | Rs.2.00 | M: 9742418836


## ಕೈ ನಾಯಕರು ಆರ್ಥಿಕತೆ ಪಾಠ ಕಲಿಯಲಿ

ಬೆಂಗಳೂರು: ದೇಶದ ಸಂಕಷ್ಟದ ಸಂದರ್ಭದಲ್ಲಿ ದೇಶವಾಸಿಗಳು ಮಿತವ್ಯಯ ಪಾಲಿಸಬೇಕು ಎಂಬ ಪ್ರಧಾನಿ ನರೇಂದ್ರ ಮೋದಿ ಅವರ ಹೇಳಿಕೆಗೆ ವಿರೋಧ ವ್ಯಕ್ತಪಡಿಸಿರುವ ಕಾಂಗ್ರೆಸ್ ವಿರುದ್ಧ ಕಿಡಿಕಾರಿರುವ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಕೇವಲ ರಾಜಕೀಯ ಕಾರಣಕ್ಕಾಗಿ ದೇಶದ ಆರ್ಥಿಕತೆಯ ಬಗ್ಗೆ ಯಾವುದೇ ತರ್ಕವಿಲ್ಲದೆ ಮಾತನಾಡುವ ಕಾಂಗ್ರೆಸ್ ನಾಯಕರು ಮೊದಲು ಆರ್ಥಿಕತೆಯ ಮೂಲ ಪಾಠಗಳನ್ನು ಕಲಿಯಲಿ. ಮೋದಿ ಅವರನ್ನು ವಿರೋಧಿಸುವ ಭರದಲ್ಲಿ ದೇಶದ ಹಿತವನ್ನು ಬಲಿಕೊಡುವುದು ಬೇಡ ಎಂದಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಪ್ರಧಾನಿ ಮೋದಿ ಅವರು ಮಿತವ್ಯಯದ ಮಾತನ್ನು ವಿರೋಧಿಸಿ ಮಾತನಾಡಿರುವ ಕಾಂಗ್ರೆಸ್ಸಿಗರ ಆರ್ಥಿಕ ಅಜ್ಞಾನ ಮತ್ತು ಅಂಧ ವಿರೋಧಕ್ಕೆ ಇದಕ್ಕಿಂತ ಸಾಕ್ಷಿ ಬೇಕಿಲ್ಲ ಎಂದಿದ್ದಾರೆ.

ಇತಿಹಾಸದ ಅರಿವು ಇಲ್ಲದ ಆರ್ಥಿಕ ನಿರ್ವಹಣೆಯ ಗಂಧ ಗಾಳಿಯೂ ಗೊತ್ತಿಲ್ಲದ ಇಂದಿನ ಕಾಂಗ್ರೆಸ್ ನಾಯಕರಿಗೆ



ಪ್ರಧಾನಿಮೋದಿಅವರುಪ್ರತಿಯೊಂದು ನಡೆಯನ್ನು ವಿರೋಧಿಸುವುದೇ ಒಂದುನಿತ್ಯ ಕಾರ್ಯವಾಗಿ ಬಿಟ್ಟಿದೆ. ರಾಷ್ಟ್ರದ ಹಿತ ದೃಷ್ಟಿಯಿಂದ ಮೋದಿ ಅವರು ನೀಡುವ ದೂರದೃಷ್ಟಿಯ ಆರ್ಥಿಕ ಸಲಹೆಗಳನ್ನು ಲೇವಡಿ ಮಾಡುವ ಕಾಂಗ್ರೆಸ್ಸಿಗರು ಒಮ್ಮೆ ತಮ್ಮದೇ ಪಕ್ಷದ ಇತಿಹಾಸವನ್ನು ತಿರುವು ಹಾಕಲಿ ಎಂದು ತಿಳಿಸಿದ್ದಾರೆ.

ಅಂದಿನ ಪ್ರಧಾನಿ ಇಂದಿರಾಗಾಂಧಿ ಅವರು 1967 ರಲ್ಲಿ ದೇಶದ ಆರ್ಥಿಕ ಶಿಸ್ತಿಗಾಗಿ ಚಿನ್ನ ಕೊಳ್ಳಬೇಡಿ ಎಂದು ಜನರಲ್ಲಿ ಮನವಿ ಮಾಡಿದ್ದರು. 2013 ರಲ್ಲಿ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರವಿದ್ದಾಗ ಹಣಕಾಸು ಸಚಿವರಾಗಿದ್ದ ಪಿ. ಚಿದಂಬರಂ ಅವರು ಚಾಲ್ತಿ ಖಾತೆ ಕೊರತೆ ಸರಿದೂಗಿಸಲು ಚಿನ್ನದ ಮೇಲಿನ ವ್ಯಾಮೋಹ ಬಿಡಿ ಎಂದು ಪದೇ ಪದೇ ಗೋಗರೆದಿದ್ದರು.

ಹೀಗಿರುವಾಗ ಕಾಂಗ್ರೆಸ್ಸಿಗರು ದೊರೆ ಮಾಡಿದರೆ ದಂಡವಿಲ್ಲ ಎಂಬಂತೆ ಇಂದಿರಾಗಾಂಧಿ ಅಥವಾ ಸೋನಿಯಾಗಾಂಧಿ ಕಾಲದಲ್ಲಿ ಕಾಂಗ್ರೆಸ್ ಸರ್ಕಾರಗಳು ಚಿನ್ನ ಕೊಳ್ಳಬೇಡಿ ಎಂದು ಕರೆ ನೀಡಿದರೆ ಅದು ಆರ್ಥಿಕ ನೀತಿ. ಆದರೆ ರಾಷ್ಟ್ರದ ಹಿತದೃಷ್ಟಿಯಿಂದ ಮೋದಿ ಅವರು ಕರೆ ನೀಡಿದರೆ ಅದು ಕಾಂಗ್ರೆಸ್ಸಿಗರಿಗೆ ತಪ್ಪಾಗಿ ಕಾಣುತ್ತಿರುವುದು ಕಾಂಗ್ರೆಸ್ ನಾಯಕರ ಎಡಬಿಡಂಗಿತನಕ್ಕೆ ಹಿಡಿದ ಕೈಗನ್ನಡಿ ಎಂದಿದ್ದಾರೆ.

## ಸೋತು ಸುಣ್ಣವಾಗಿರುವ ಪಕ್ಷಕ್ಕೆ ವಿಜಯೇಂದ್ರ ಸಂಜೀವಿನಿ: ಯಡಿಯೂರಪ್ಪ ಅಭಿಮಾನೋತ್ಸವ ಮೂಲಕ ಪ್ರಬಲ ಸಂದೇಶ ರವಾನೆ!



ಚಿತ್ರದುರ್ಗ: ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ 50 ವರ್ಷಗಳ ರಾಜಕೀಯ ಪಯಣವನ್ನು ಸ್ಮರಿಸಲು ಚಿತ್ರದುರ್ಗದಲ್ಲಿ ಆಯೋಜಿಸಲಾದ ಬೃಹತ್ ಸಮಾವೇಶವು ರಾಜ್ಯ ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿದೆ.

ಕಳೆದ ಮೂರು ವರ್ಷಗಳಿಂದ ಬಿಜೆಪಿಯ ಮೌನವನ್ನು ಬಹಿರಂಗವಾಗಿ ಟೀಕಿಸುತ್ತಿದ್ದವರು ಸಹ ಈಗ ತಮ್ಮ ನಿಲುವನ್ನು ಬದಲಾಯಿಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಸಮ್ಮುಖದಲ್ಲಿ ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ನಿರರ್ಗಳವಾಗಿ, ಸರಾಗವಾಗಿ ಹಿಂದಿ ಭಾಷೆಯನ್ನು ಭಾಷಣ ಮಾಡಿದ್ದು ರಾಜಕಾರಣಿಗಳ ಗಮನ ಸೆಳೆದಿದೆ.

ವಿಜಯೇಂದ್ರ ಅವರು ಬಹುಭಾಷಾ ವಾಗ್ಮಿ ಎಂದು ತೋರಿಸಿಕೊಳ್ಳಲು ಸಂಕೀರ್ಣ ಹಿಂದಿ ಪದಗಳನ್ನು ಸಹ ಸರಾಗವಾಗಿ ಉಚ್ಚರಿಸಿ ಎಲ್ಲರ ಗಮನ ಸೆಳೆದರು.

ಕವಿ ರವೀಂದ್ರನಾಥ ಟ್ಯಾಗೋರ್ ಜೊತೆಗೆ ಭಾರತೀಯ ಜನಸಂಘದ ಸಂಸ್ಥಾಪಕರಾದ ಶ್ಯಾಮ ಪ್ರಸಾದ್ ಮುಖರ್ಜಿ ಮತ್ತು ದೀನ್ ದಯಾಳ್ ಉಪಾಧ್ಯಾಯ ಅವರ ಹೆಸರುಗಳನ್ನು ಸಹ ವಿಜಯೇಂದ್ರ ನೆನಪಿಸಿಕೊಂಡರು. ನಾಗರಿಕರನ್ನು ಕ್ರೌರ್ಯದಿಂದ ನಡೆಸಿಕೊಂಡ "ಜನವಿರೋಧಿ, ಹಿಂದೂ ವಿರೋಧಿ" ವ್ಯವಸ್ಥೆಯನ್ನು ನಿರ್ಣಾಯಕವಾಗಿ ತೆಗೆದುಹಾಕಲಾಗಿದೆ ಎಂದು ಅವರು ಪ್ರತಿಪಾದಿಸಿದರು.

ಯಡಿಯೂರಪ್ಪ ಅವರ ಸೇವೆಗಳ ಬಗ್ಗೆ ಬೆಳಕು ಚೆಲ್ಲಿದ ವಿಜಯೇಂದ್ರ, ಮುಖ್ಯಮಂತ್ರಿ ಹುದ್ದೆಯಿಂದ ಕೆಳಗಿಳಿದು ಆರು ವರ್ಷಗಳ ನಂತರವೂ ಅವರಿಗೆ ಎಲ್ಲಾ ಕಡೆಯಿಂದ ಬೆಂಬಲ ಸಿಗುತ್ತಿದೆ ಎಂದು ಹೇಳಿದರು.

ಯಡಿಯೂರಪ್ಪ ಅವರು ಎಂದಿಗೂ ಸವಾಲುಗಳಿಂದ ಹಿಂದೆ ಸರಿಯಲಿಲ್ಲ ಎಂದು ಅವರು ಒತ್ತಿ ಹೇಳಿದರು. ಬದಲಾಗಿ, ಅವರು ಅವುಗಳನ್ನು ಧೈರ್ಯದಿಂದ ಎದುರಿಸಿದರು ಮತ್ತು ಜನರ ಕಲ್ಯಾಣಕ್ಕಾಗಿ ನಿರಂತರವಾಗಿ ಶ್ರಮಿಸಿದರು.

ಯಡಿಯೂರಪ್ಪ ಅಭಿಮಾನೋತ್ಸವ ವೇದಿಕೆಯಲ್ಲಿ ವಿವಿಧ ಸಮುದಾಯಗಳ ಸ್ವಾಮೀಜಿಗಳ ಉಪಸ್ಥಿತರಿದ್ದರು.

ಇದು ಯಡಿಯೂರಪ್ಪ ಅವರನ್ನು ಎಲ್ಲಾ ಸಮುದಾಯಗಳ ಸ್ವಾಮೀಜಿಗಳು ಒಪ್ಪಿಕೊಂಡಿದ್ದಾರೆ ಎಂಬುದರ ಸಂದೇಶವಾಗಿದೆ ಎಂದು ವಿಜಯೇಂದ್ರ ತಿಳಿಸಿದರು.

ಯಡಿಯೂರಪ್ಪ ಎಂದಿಗೂ ಆರಾಮದಿಂದ ರಾಜಕೀಯಕ್ಕೆ ಬಂದಿಲ್ಲ. ವಿಧಾನಸಭಾ ಕ್ಷೇತ್ರದ ಒಳಗೆ ಮತ್ತು ಹೊರಗೆ ನಿರಂತರ ಹೋರಾಟದ ಮೂಲಕ ತಮ್ಮ ಹಾದಿಯನ್ನು ರೂಪಿಸಿಕೊಂಡರು ಎಂದು ಅವರು ಹೇಳಿದರು.

## ‘ಜನರಿಂದ ನಾನು ಮೇಲೆ ಬಂದೆ’ ಚಿತ್ರದ ತಾಯಿ ಹಾಡು ಬಿಡುಗಡೆ ಮಾಡಿದ ಶೋಭಾ ಕರಂದ್ಲಾಜೆ



**ಬೆಳಗಾವಿ ವಾರ್ತೆ ಬೆಂಗಳೂರು :** ವಿಶ್ವ ತಾಯಂದಿರ ದಿನದ ಅಂಗವಾಗಿ ಶ್ರೀ ಮಂಜುನಾಥ ಫಿಲಂಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ‘ಜನರಿಂದ ನಾನು ಮೇಲೆ ಬಂದೆ’ ಕನ್ನಡ ಚಲನಚಿತ್ರದ ‘ಜಗವೇ ಪೂಜಿಸುವ ಗುಡಿಯಿರದಾ ದೇವತೆ’ ಎಂಬ ತಾಯಿ ಹಾಡನ್ನು ಜನ ನಾಯಕಿ, ಹಾಗೂ ಜನಪ್ರಿಯ ಕೇಂದ್ರ ಸಚಿವರಾದ ಶೋಭಾ ಕರಂದ್ಲಾಜೆ ಅವರು ಬಿಡುಗಡೆ ಮಾಡಿ ಹಾಡಿನಲ್ಲಿ ನಾಯಕ ನಟ ಗಂಧರ್ವ ರಾಜ್, ತಾಯಿ ಮಧುಶ್ರೀ ವಸಂತ, ಮಾಸ್ಟರ್ ರೋನಕ್, ಬೇಬಿ ಧನ್ವಿತಾ ತುಂಬಾ ಚೆನ್ನಾಗಿ ನಟಿಸಿದ್ದಾರೆಂದು ಚಿತ್ರ ತಂಡಕ್ಕೆ ಶುಭಕೋರಿದರು.

ಈ ಹಾಡಿನ ಸಾಹಿತ್ಯವನ್ನು ಪೃಥ್ವಿ ರಾಜ್ ಸಂಕಿ ಬರೆದಿದ್ದು, ಎ ಆರ್ ತನ್ವೀರ್ ಹಾಡಿದ್ದಾರೆ, ಸಂಗೀತ ನಿರ್ದೇಶನವನ್ನು ಪ್ರಣವ್ ಸತೀಶ್ ಮಾಡಿದ್ದಾರೆ. ಗಂಧರ್ವ ರಾಜ್ (ಶಂಕರ), ಅಭಿಜಿತ್, ಶೈಲಜಾ ದ್ವಾರಕೀಶ್, ಚಾಮರಾಜ ಮಾಸ್ಟರ್, ನವಿಲುಗರಿ ನವೀನ್ ಪಿ ಬಿ, ಶಿವಕುಮಾರ್ ಆರಾಧ್ಯ, ಜಯಪ್ರಕಾಶ್ ನಾಗತಿಹಳ್ಳಿ, ಪ್ರವೀಣ ಕುಲಕರ್ಣಿ, ಸಂದೀಪ್ ಮಲಾನಿ, ಅನಿಲ್ ಕುಮಾರ್ ಬಾಬಿ, ಮಧುಶ್ರೀ ವಸಂತ, ಶಿವಣ್ಣ, ಆಪ್ತಿ ಪಟವರ್ಧನ್, ಕೃತಿಕಾ ದಿವಾಕರ್, ಶಾಂತಾ ಪಾಪು, ಸುನಂದ ಕಲಬುರಗಿ, ಕಾಟೇರ ಕೇಶವ್, ಅಂಬೇಡ್ಕರ್ ಮಹೇಶ್, ಡಾ.ಅಕ್ಷತ, ವಿಶಾಲ ಸತೀಶ್, ಲಲಿತ್ ಕೃಷ್ಣ, ಯಶುರಾಜ್, ಶಶಿರೇಖಾ ಸೇರಿದಂತೆ ದೊಡ್ಡ ತಾರಾಬಳಗವಿದೆ.

ಛಾಯಾಗ್ರಾಹಣ ಮತ್ತು ಸಂಕಲನ ಟಿ ಆರ್ ಗೌತಮ್ , ಸಾಹಿತ್ಯ ನವಿಲುಗರಿ ನವೀನ್ ಪಿ ಬಿ, ಪೃಥ್ವಿ ರಾಜ್ ಸಂಕಿ, ಭುವನ್ ಎಂ ಎಸ್ , ನೃತ್ಯ ನಿರ್ದೇಶನ , ಚಾಮರಾಜ ಮಾಸ್ಟರ್, ಅರುಣ್ ಮಾಸ್ಟರ್, ಸತೀಶ್ ಕೃಷ್ಣ ಶೆಟ್ಟಿ, ಪೂಜಾ ರಾಯಸಂ , ಡಿ ಐ ಮತ್ತು ಪೋಸ್ಟರ್ ಡಿಸೈನ್ ಟಿ ಆರ್ ಜಿ ಪಿಕ್ಸೆಲ್ಸ್ ಮಿಕ್ಸಿಂಗ್ ಮಾಸ್ಟರಿಂಗ್ ಪೂರ್ಣ ಶ್ರೀಖರ್ ಎಂ, ಪಿ ಆರ್ ಓ ಆರ್ ಚಂದ್ರಶೇಖರ್, ಡಾ ಪ್ರಭು ಗಂಜೀಹಾಳ, ಡಾ ವೀರೇಶ ಹಂಡಿಗಿ, ನವಿಲುಗರಿ ನವೀನ್ ಪಿ ಬಿ ಅವರು ಕಥೆ ಚಿತ್ರ ಕಥೆ ಸಂಭಾಷಣೆ ಜೊತೆ ನಿರ್ದೇಶನವನ್ನು ಮಾಡಿದ್ದಾರೆ. ಸಹಾಯಕ ನಿರ್ದೇಶನ ಲಲಿತ್‌ಕೃಷ್ಣ ಅವರದಿದ್ದು ಶ್ರೀಮತಿ ಬಿ ಹೇಮಾವತಿ ಬಂಡವಾಳ ಹೂಡಿದ್ದಾರೆ, ಮ್ಯೂಸಿಕ್ ಬಜಾರ್ ಯುಟ್ಯೂಬ್ ಚಾನೆಲ್ ಹಾಡು ಬಿಡುಗಡೆ ಮಾಡಲಾಗಿದ್ದು ಎಲ್ಲರೂ ನೋಡಿ ಪ್ರೋತ್ಸಾಹ ನೀಡಬೇಕು, ಚಿತ್ರವೂ ಕೂಡ ಅತೀ ಶೀಘ್ರದಲ್ಲೇ ಬೆಳ್ಳಿಪರದೆ ಮೇಲೆ ಬಿಡುಗಡೆಯಾಗಲಿದೆ ಎಂದು ಚಿತ್ರ ತಂಡದವರು ತಿಳಿಸಿದ್ದಾರೆ.

**–ಡಾ.ಪ್ರಭು ಗಂಜಿಹಾಳ**
**ಮೊ–9448775346**

## ಸ್ತ್ರೀಕುಲದ ಆದರ್ಶ ಹೇಮರಡ್ಡಿ ಮಲ್ಲಮ್ಮ



ಮೂಡಲಗಿ: ತಾಲ್ಲೂಕಿನ ವೆಂಕಟಾಪೂರ ಗ್ರಾಮದಲ್ಲಿ ಜರುಗಿದ ಹೇಮರಡ್ಡಿ ಮಲ್ಲಮ್ಮ 604 ಜಯಂತ್ಯೋತ್ಸವದ ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ.ದ್ವಿತೀಯ ವರ್ಷದ ಪರೀಕ್ಷೆಯಲ್ಲಿ ಸಾಧನೆಗೈದ ಗ್ರಾಮದ ವಿದ್ಯಾರ್ಥಿ/ ನಿಯರನ್ನು ಸನ್ಮಾನಿಸಲಾಯಿತು.

**ಬೆಳಗಾವಿ ವಾರ್ತೆ ಮೂಡಲಗಿ :** ಸದಾಚಾರ, ಸದ್ವಿಚಾರಗಳುಳ್ಳ ಗೃಹಿಣಿಯಾಗಿ ,ಸ್ತ್ರೀ ಕುಲದ ಆದರ್ಶ ಉದಾಹರಣೆಯಾಗಿ ಲೌಕಿಕ ಸಾಧನೆಯೊಂದಿಗೆ ಪಾರಮಾರ್ಥಿಕ ಉನ್ನತಿ ಸಾಧಿಸಿದ ಹೇಮರಡ್ಡಿ ಮಲ್ಲಮಾಂಭೆಯ ಬದುಕು ಸದಾಕಾಲ ಸ್ಮರಣೀಯವಾದುದು . ತ್ಯಾಗ ,ಸೇವೆ,ಪರೋಪಕಾರಗಳ ತ್ರಿವೇಣಿ ಸಂಗಮದಂತಿರುವ ಮಲ್ಲಮ್ಮ ತಾಯಿಯ ಜೀವನ ಸಂದೇಶಗಳು ಇಂದಿನ ಸಮಾಜಕ್ಕೆ ಅತ್ಯಗತ್ಯವಾಗಿವೆ ಎಂದು ಕಕಮರಿಯ ಶ್ರೀ ರಾಯಲಿಂಗೇಶ್ವರ ಸಂಸ್ಥಾನಮಠದ ಪೂಜ್ಯ ಶ್ರೀಅಭಿನವ ಗುರುಲಿಂಗ ಜಂಗಮ ಮಹಾಸ್ವಾಮಿಗಳು ಕರೆಕೊಟ್ಟರು.

ತಾಲ್ಲೂಕಿನ ವೆಂಕಟಾಪೂರ ಗ್ರಾಮದಲ್ಲಿ ಜರುಗಿದ ಹೇಮರಡ್ಡಿ ಮಲ್ಲಮ್ಮ 604 ಜಯಂತ್ಯೋತ್ಸವದ ಅಂಗವಾಗಿ ಜರುಗಿದ ಎರಡನೇದಿನದ ಪ್ರವಚನ ಕಾರ್ಯಕ್ರಮದ ದಿವ್ಯಸಾನಿಧ್ಯವಹಿಸಿ ಅವರು ಆಶೀರ್ವಚನ ನೀಡಿದರು.ಆಧ್ಯಾತ್ಮಿಕ ಚಿಂತಕರಾದ ಮುನ್ಯಾಳದ ಶ್ರೀ ಲಕ್ಷ್ಮಣ ದೇವರು ಮಹಾಸಾಧ್ವಿ ಮಲ್ಲಮ್ಮನವರ ಜೀವನ ವೃತ್ತಾಂತದ ಕುರಿತು ನೀಡಿದ ಪ್ರವಚನ ಭಕ್ತಾದಿಗಳ ಮೆಚ್ಚುಗೆಗೆ ಪಾತ್ರವಾಯಿತು. ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ.ದ್ವಿತೀಯ ವರ್ಷದ ಪರೀಕ್ಷೆಯಲ್ಲಿ ಸಾಧನೆಗೈದ ಗ್ರಾಮದ ವಿದ್ಯಾರ್ಥಿ/ ನಿಯರನ್ನು ಸನ್ಮಾನಿಸಲಾಯಿತು. ನಾಗನೂರಿನ ಮಾತೋಶ್ರೀ ಕಾವ್ಯಶ್ರೀ ಅಮ್ಮನವರು ಮಾತನಾಡಿ ಧಾರ್ಮಿಕ ಕಾರ್ಯಕ್ರಮಗಳ ಮೂಲಕ ಸಾಮಾಜಿಕ ಜಾಗೃತಿ ಉಂಟುಮಾಡುತ್ತಿರುವ ವೆಂಕಟಾಪೂರ ಗ್ರಾಮಸ್ಥರ ಕಾರ್ಯ ಇತರರಿಗೆ ಮಾದರಿಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು. ಮೂಡಲಗಿ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ವಿಜಯ ಸೋನವಾಲ್ಕರ ರವರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು.

ಕುಂಭಮೇಳದೊಂದಿಗೆ, ಮಹಾಯೋಗಿ ವೇಮನರು ಹಾಗೂ ಮಲ್ಲಮಾಂಭೆಯ ಭಾವಚಿತ್ರದ ಭವ್ಯ ಮೆರವಣಿಗೆ ಮತ್ತು ಮಹಾಪ್ರಸಾದ ವಿತರಣೆ ಜರುಗಿತು. ಸುತ್ತಲಿನ ಗ್ರಾಮಗಳಿಂದ ಆಗಮಿಸಿದ ಭಕ್ತಾದಿಗಳು ಪ್ರವಚನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸಂತಸ ಹಂಚಿಕೊಂಡರು. ಶಿಕ್ಷಕಿ ತಂಗೆಮ್ಮ ಹೊಸಮನಿ ಮತ್ತು ಹನಮಂತಗೌಡ ಪಾಟೀಲ ನಿರೂಪಿಸಿದರು. ಆರ್.ಎಲ್.ಮಿರ್ಜಿ ಸ್ವಾಗತಿಸಿದರು.

## ಸ್ವ–ಗ್ರಾಮಕ್ಕೆ ಮರಳಿದ ಯೋಧನಿಗೆ ಅದ್ದೂರಿ ಸ್ವಾಗತ

**ಬೆಳಗಾವಿ ವಾರ್ತೆ ಮೋಳೆ;**–ಕಳೆದ23 ವರ್ಷಗಳಿಂದ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿ ರವಿವಾರ ಕಾಗವಾಡ ತಾಲೂಕಿನ ಜುಗೂಳ ಗ್ರಾಮಕ್ಕೆ ಆಗಮಿಸಿದ ಗಜಾನನ ಅಂಬಿ ದಂಪತಿಯನ್ನು ಗೆಳೆಯರ ಬಳಗ ಹಾಗೂ ಗ್ರಾಮಸ್ಥರು ಅದ್ದೂರಿಯಾಗಿ ಸ್ವಾಗತಿಸಿ, ಭವ್ಯ ಮೆರವಣಿಗೆಮಾಡಿದರು.

ಬಸ್ ನಿಲ್ದಾಣದಿಂದ ಪೇಠೆಯ ಮೂಲಕ ಭವ್ಯ ಮೆರವಣಿಗೆಯ ಮೂಲಕ ಆಗಮಿಸಿ ಯೋಧ ಗಜಾನನ ಅಂಬಿಯುವರನ್ನು ಗ್ರಾಮದಲ್ಲಿ ಮಹಿಳೆಯರು ಆರತಿ ಬೆಳಗಿ ಬರಮಾಡಿಕೊಂಡರು.ಈ ವೇಳೆ ಗ್ರಾಮದ ಯುವಕರು ಪುಷ್ಪಾರ್ಚನೆ ಮಾಡಿ, ಭಾರತ ಮಾತಾಕೀ ಜೈ, ಜೈ ಹಿಂದ್ ಎಂಬ ಘೋಷಣೆಗಳನ್ನು ಕೂಗಿ ಸಂಬ್ರಮಿಸಿದರು.

ಸಮಾರಂಭದ ಧಿವ್ಯ ಸಾನಿಧ್ಯವನ್ನು ಪರಮಾನಂದವಾಡಿಯ ಪ.ಪೂ.ಡಾ. ಅಭಿನವ ಬ್ರಹ್ಮಾನಂದ ಸ್ವಾಮಿಗಳು ವೀರ ಯೋಧನನ್ನು ಸನ್ಮಾನಿಸಿ ನಿಮಗೆ ಮತ್ತು ನಿಮ್ಮ ಮಕ್ಕಳಿಗೆ ಸಿನಿಮಾ ನಟ,ನಟಿಯರು ಆದರ್ಶವಾಗ ಬಾರದು, ವೀರ ಯೋಧರು ಮಾದರಿ ಜೊತೆಗೆ ಸ್ಪೂರ್ತಿಯಾಗಬೇಕೆಂದರು.

ಕಳೆದ 23 ವರ್ಷಗಳಿಂದ ದೇಶ ಸೇವೆ ಮಾಡಿ, ತಾಯ್ನಾಡಿಗೆ ಬಂದಿರುವ ಗಜಾನನ ಹಾಗೂ ಅವರ ಧರ್ಮಪತ್ನಿ ಯೋಗಿತಾ ಅವರು ಇನ್ನು ಮುಂದೆ ಸಮಾಜ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು,ಗ್ರಾಮದ ಆಸಕ್ತ ಯುವಕರು ಸೇನೆ ಸೇರಲು ಅವರಿಗೆ ಸೂಕ್ತ ಮಾಹಿತಿ ಮತ್ತು ತರಬೇತಿ ನೀಡಬೇಕೆಂದರು. ಜೊತೆಗೆ ಸಾಮಾಜಿಕ ಸೇವೆಗಳಲ್ಲಿ ತೊಡಗಲಿ ಎಂದ ಅವರು ಬಿಸಿಲು,ಮಳೆ,ಗಾಳಿ,ಚಳಿಯನ್ನು ಲೆಕ್ಕಿಸದೇ, ದೇಶದ ಭದ್ರತೆಗಾಗಿ ಹಗಲಿರುಳು ಶ್ರಮಿಸುತ್ತಿರುವ ಸೈನಿಕರಿಗೆ ಶಕ್ತಿ ತುಂಬುವ ಕೆಲಸ ಮಾಡಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಿಕೆಪಿಎಸ್ ಅಧ್ಯಕ್ಷ ಅಣ್ಣಾಸಾಬ ಪಾಟೀಲ ಮಾತನಾಡಿ ಪ್ರಧಾನಿ ನರೇಂದ್ರ ಮೋದಿಯವರಿಗೆ 75 ವರ್ಷವಾದರೂ 25 ರ ಹರೆಯದವರಂತೆ ಕಾರ್ಯನಿರ್ವಹಿಸುತ್ತಿದ್ದಾರೆ, ಆದ್ದರಿಂದ ಗಜಾನನ ಅಂಬಿಯವರು ಈಗ ಕೇವಲ 43 ವರ್ಷ. ಅದಕ್ಕಾಗಿ ಅವರು ತಮ್ಮ ನಿವೃತ್ತಿ ಜೀವನವನ್ನು ಸಮಾಜಸೇವೆಗೆ ಮುಡುಪಾಗಿಟ್ಟು ಸಮಾಜಮುಖಿ ಕಾರ್ಯಗಳನ್ನು ಮಾಡಲಿ ಎಂದು ಶುಭ ಕೋರಿದರು.



ಮೋಳೆ: ಸೇನೆಯಿಂದ ನಿವೃತ್ತಿ ಹೊಂದಿ ಸ್ವ–ಗ್ರಾಮ ಜುಗೂಳಕ್ಕೆ ಆಗಮಿಸಿದ ಜನಾನನಂಬಿಯವರನ್ನು ಪೂಜ್ಯರು, ಗಣ್ಯರು ಸನ್ಮಾನಿಸುತ್ತಿರುವ ಚಿತ್ರ.

ಧಿವ್ಯ ಸಾನಿಧ್ಯವನ್ನು ಹ,ಬ.ಪ. ಶ್ರೀ ಚಂದ್ರಕಾಂತ ಪಾಟೀಲ ಮಹಾರಾಜರು ಆಶೀರ್ವಚನ ನೀಡಿದರು. ನಂತರ ನೂರಾರು ಗ್ರಾಮಸ್ಥರು, ಬಂಧು ಬಾಂಧವರು, ಸ್ನೇಹಿತರು ಯೋಧನಿಗೆ ಸನ್ಮಾನಿಸಿದರು.

ಈ ವೇಳೆ ವೇದಿಕೆಯ ಮೇಲೆ ಅಧ್ಯಕ್ಷ ಅಣ್ಣಾಸಾಬ ಪಾಟೀಲ ,ಬಾಲಚಂದ್ರ ಅಂಬಿ, ಅಕ್ಕಾತಾಯಿ ಅಂಬಿ,ಯೋಗಿತಾ ಅಂಬಿ, ಕಲ್ಲಪ್ಪ ಅಂಬಿ, ದಾದಾ ಅಂಬಿ, ಸುರೇಶ ಪಾಟೀಲ ಬಿ.ಆಯ್.ಪಾಟೀಲ, ಅನೀಲ ಕಡೋಲಿ, ರಾಜು ಕಡೋಲಿ, ತಾತ್ಯಾಸಾಬ ಅಂಬಿ,ಸೇರಿದಂತೆ ಅನೇಕರು ಇದ್ದರು. ಮನೋಜ ಮಡಿವಾಳ ಸ್ವಾಗತಿಸಿದರು, ಅನಿಲ ಮಿನಚೆ,ನಿರ್ವಹಿಸಿದರು, ಮಹೇಳ ಬೆಳ್ಳಂಕ್ಕಿ ಪ್ರಾಸ್ತಾವಿಕವಾಗಿ ಮಾತನಾಡಿ ವಂದಿಸಿದರು.

## ಪ್ರವೇಶಕ್ಕೆ ಆನ್ಲೈನ್ ಅರ್ಜಿ; ಅವಧಿ ವಿಸ್ತರಣೆ

**ಬೆಳಗಾವಿ ವಾರ್ತೆ ವಿಜಯನಗರ (ಹೊಸಪೇಟೆ):** ಹೂವಿನಹಡಗಲಿ ತಾಲೂಕಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಡಿಜಿಟಿ ಮಾರ್ಗಸೂಚಿಗಳ ಪ್ರಕಾರ ಈಗಾಗಲೇ ಅರ್ಹ ಅಭ್ಯರ್ಥಿಗಳಿಂದ ಪ್ರವೇಶಕ್ಕೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವದಿಯನ್ನು ಮೇ 15ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹೂವಿನಹಡಗಲಿಯ ಸರ್ಕಾರಿ ಕೈಗಾರಿಕ ತರಬೇತಿ ಸಂಸ್ಥೆಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಜಿಲ್ಲೆಯ ಪಡಿತರ ಚೀಟಿದಾರರಿಗೆ ಮೇ, ತಿಂಗಳ ಪಡಿತರ ಆಹಾರಧಾನ್ಯ ವಿತರಣೆ



**ಬೆಳಗಾವಿ ವಾರ್ತೆ ಧಾರವಾಡ:** ರಾಜ್ಯ ಸರ್ಕಾರವು ರಾಷ್ಟ್ರೀಯ ಆಹಾರ ಭದ್ರತಾ ಯೋಜನೆ ಯಡಿ ಪಡಿತರ ಆಹಾರ ಧಾನ್ಯಗಳನ್ನು ಪೂರೈಸುತ್ತಿದ್ದು, ಅದರಂತೆ ಮೇ, 2026 ಹಾಗೂ ಜೂನ, 2026ನೇ ಈ ಎರಡು ಮಾಹೆಗಳಿಗೆ ಸಂಬಂಧಿಸಿದಂತೆ ಜಿಲ್ಲೆಯ ಅಂತ್ಯೋದಯ ಅನ್ನ ಪಡಿತರ ಚೀಟಿ & ಪಿಎಚ್ಎಚ್ (ಬಿಪಿಎಲ್) ಪಡಿತರ ಚೀಟಿದಾರರಿಗೆ ಆಹಾರಧಾನ್ಯ ವನ್ನು ವಿತರಣೆ ಮಾಡಲಾಗುತ್ತಿದೆ.

ಅಂತ್ಯೋದಯ ಪಡಿತರ ಚೀಟಿ (ಪ್ರತಿ ಕಾರ್ಡಿಗೆ) 35 ಕೆಜಿ + 35 ಕೆಜಿ = ಒಟ್ಟು 70 ಕೆಜಿ ಅಕ್ಕಿ, ಆದ್ಯತಾ (ಬಿಪಿಎಲ್) ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ ರಾಜ್ಯ ಮತ್ತು ಕೇಂದ್ರ ವರ್ಗದಡಿಯ ಪಡಿತರ ಕಾರ್ಡುಗಳಿಗೆ 5 ಕೆಜಿ + 5 ಕೆಜಿ = ಒಟ್ಟು 10 ಕೆಜಿ ಅಕ್ಕಿಯನ್ನು ವಿತರಣೆ ಮಾಡಲಾಗುತ್ತದೆ.

ಮೇ, 2026ನೇ ಮಾಹೆಯಲ್ಲಿ ಕೇಂದ್ರ ವ್ಯಾಪ್ತಿ ಅಂದರೆ ಎನ್‌ಎಫ್‌ಎಸ್‌ಎ ವರ್ಗದಡಿ ಮೇ ಮತ್ತು ಜೂನ–2026 ಎರಡೂ ಮಾಹೆಗಳ ಪಡಿತರ ಆಹಾರಧಾನ್ಯವನ್ನು ವಿತರಿಸಲಾಗುತ್ತಿದ್ದು, ಎಲ್ಲ ಅರ್ಹ ಫಲಾನುಭವಿಗಳು ತಮ್ಮ ವ್ಯಾಪ್ತಿಯ ನ್ಯಾಯ ಬೆಲೆ ಅಂಗಡಿಗಳಲ್ಲಿ ಎರಡೂ ಮಾಹೆಗಳಿಗೆ ಸಂಬಂಧಿಸಿದಂತೆ ಮಾಹೆವಾರು ಪ್ರತ್ಯೇಕವಾಗಿ ಬೆರಳಚ್ಚು ನೀಡಿ ಉಚಿತವಾಗಿ ಪಡಿತರವನ್ನು ಪಡೆಯ ಬಹುದು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರ್ಮಿಕರು ಮಕ್ಕಳಿಗೆ ಶಿಕ್ಷಣ ಕೊಡಿಸಬೇಕು

**ಬೆಳಗಾವಿ ವಾರ್ತೆ ಮೂಡಲಗಿ:** 'ಕಾರ್ಮಿಕರು ಕಡ್ಡಾಯವಾಗಿ ಕಾರ್ಮಿಕ ಗುರುತಿನ ಪತ್ರವನ್ನು ಮಾಡಿಕೊಂಡು ಅದರ ಮೂಲಕ ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು' ಎಂದು ಮೂಡಲಗಿ ಯ ಜೆಎಂಎಫ್‌ಸಿ ನ್ಯಾಯಾಲಯದ ಹಿರಿಯ ಸಿವಿಲ ನ್ಯಾಯಾಧೀಶೆ ಶಾಂತಮ್ಮ ಮಲ್ಲಿಕಾರ್ಜುನ ಗೌಡ ಪಿ. ಅವರು ಹೇಳಿದರು.

ಇಲ್ಲಿಯ ರವಿ ಸಮೆಂಟ್ಸ್ ಪ್ರೊಡಕ್ಟ್ ಇಂಡಸ್ಟ್ರೀಜ್‌ದಲ್ಲಿ ಮೂಡಲಗಿ ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ, ತಾಲ್ಲೂಕು ಕಾರ್ಮಿಕ ಇಲಾಖೆ ಇವರ ಸಹಯೋಗದಲ್ಲಿ ಆಚರಿಸಿದ ಅಂತರಾಷ್ಟ್ರೀಯ ಕಾರ್ಮಿಕ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಕಾರ್ಮಿಕರು ಮಕ್ಕಳಿಗೆ ಶಿಕ್ಷಣ ಕೊಡಿಸಬೇಕು ಮತ್ತು ಬಾಲ್ಯ ವಿವಾಹ ವನ್ನು ಮಾಡಬಾರದು ಎಂದು ತಿಳುವಳಿಕೆ ನೀಡಿದರು.




ಮೂಡಲಗಿ: ಪಟ್ಟಣದಲ್ಲಿ ಜರುಗಿದ ಅಂತರಾಷ್ಟ್ರೀಯ ಕಾರ್ಮಿಕ ದಿನಾಚರಣೆಯಲ್ಲಿ ಮೂಡಲಗಿಯ ಜೆಎಂಎಫ್‌ಸಿ ನ್ಯಾಯಾಲಯದ ಹಿರಿಯ ಸಿವಿಲ ನ್ಯಾಯಾಧೀಶೆ ಶಾಂತಮ್ಮ ಮಲ್ಲಿಕಾರ್ಜುನ ಗೌಡ ಪಿ ಅವರು ಮಾತನಾಡಿದರು.

ತಾಲ್ಲೂಕು ಕಾರ್ಮಿಕರ ನಿರೀಕ್ಷಕ ಪಾಂಡುರಂಗ ಮಾವರಕರ ಮಾತನಾಡಿ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರಿಗೆ ಸರ್ಕಾರದ ಪ್ರತ್ಯೇಕ ಸೌಲಭ್ಯಗಳಿವ.

ಅಸಂಘಟಿತರಿಗೆ ಮದುವೆಗೆ ಧನ ಸಹಾಯ, ಅಪಘಾತ ಪರಿಹಾರದಂತ ಹಲವಾರ ಸೌಲಭ್ಯಗಳಿದ್ದು, ಕಾರ್ಮಿಕರು ಕಡ್ಡಾಯವಾಗಿ ನೋಂದಣಿ ಮಾಡಿಸಿ ಕಾರ್ಮಿಕ ಕಾರ್ಡ್ ಮಾಡಿಸಬೇಕು ಎಂದರು. ಅಧ್ಯಕ್ಷತೆ ವಹಿಸಿದ್ದ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಆರ್.ಆರ್.ಭಾಗೋಜಿ ಮಾತನಾಡಿದರು.

ನ್ಯಾಯವಾದಿಗಳ ಸಂಘದ ಪದಾಧಿಕಾರಿಗಳಾದ ಎಲ್.ಬಿ. ವಡೇರ, ಅನಿಲ ಕೌಜಲಗಿ, ಎಲ್.ಎಸ್. ಯಡ್ರಾಂವಿ, ಎಸ್. ವೈ. ಸಣ್ಣಕ್ಕಿ, ಆರ್.ಎಸ್. ತೋಳಮರ್ಡಿ, ಜ್ಯೋತಿ ಕುಡತೆ, ರವಿ ಸಿಮೆಂಟ್ ಪ್ರೋಡಕ್ಟ್ ಇಂಡಸ್ಟ್ರೀಸ್‌ನ ಮಾಲೀಕರಾದ ಬಸವರಾಜ ಢವಳೇಶ್ವರ, ಕಾರ್ಮಿಕರ ಸಂಘದ ಅಧ್ಯಕ್ಷ ಬಸವರಾಜ ಪೋಳ, ಕಾರ್ಯದರ್ಶಿ ಸುಭಾಷ ಗೊಡ್ಯಾಗೋಳ ಅತಿಥಿಗಳಾಗಿ ಭಾಗವಹಿಸಿದ್ದರು.

# ಯಲ್ಲಮ್ಮನ ಗುಡ್ಡದಲ್ಲಿನ ಪ್ರತಿಯೋಬ್ಬ ವ್ಯಾಪಾರಿಗಳು ಪ್ಲಾಸ್ಟಿಕ್ ಮುಕ್ತವಾಗಿ ವ್ಯವಹಾರ ಮಾಡುವುದಾಗಿ ಸಂಕಲ್ಪ ತೋಡಬೇಕು



ದೇವಸ್ಥಾನದ ಪ್ರತಿಯೊಂದು ಅಂಗಡಿಗಳಿಗೆ ತೆರಳಿ ಪ್ಲಾಸ್ಟಿಕ್ ಬಳಸದಂತೆ ಜಾಗೃತಿ ಮೂಡಿಸಲಾಯಿತು.

**ಬೆಳಗಾವಿ ವಾರ್ತೆ ಉಗರಗೋಳ:** ಯಲ್ಲಮ್ಮನ ಗುಡ್ಡದಲ್ಲಿನ ಪ್ರತಿಯೋಬ್ಬ ವ್ಯಾಪಾರಿಗಳು ಪ್ಲಾಸ್ಟಿಕ್ ಮುಕ್ತವಾಗಿ ವ್ಯವಹಾರ ಮಾಡುವುದಾಗಿ ಸಂಕಲ್ಪ ತೋಡಬೇಕು ಎಂದು ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಧರ್ಶಿ ಪ್ರಭಾವತಿ ಫಕೀರಪೂರ ಹೇಳಿದರು. ಸಮೀಪದ ಯಲ್ಲಮ್ಮನ ಗುಡ್ಡದಲ್ಲಿ ಶನಿವಾರ ರಂದು ಹಮ್ಮಿಕೊಂಡ ಪ್ಲಾಸ್ಟಿಕ್ ಮುಕ್ತ ಯಲ್ಲಮ್ಮ ದೇವಸ್ಥಾನ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು. ದೇವಸ್ಥಾನದಲ್ಲಿ ಪ್ಲಾಸ್ಟಿಕ್ ಮುಕ್ತ ವಾತಾವರಣ ನಿರ್ಮಾಣ ವಾದರೆ ಮಾತ್ರ ಪರಿಸರ ಉಳಿಯಲು ಸಾಧ್ಯ. ಈ ಅಭಿಯಾನಕ್ಕೆ ದೇವಸ್ಥಾನದ ಎಲ್ಲ ವ್ಯಾಪಾರಿಗಳು ಕೈಜೋಡಿಸಬೇಕು ಎಂದು ಕರೆಕೊಟ್ಟರು. ಸ್ಥಳಿಯರು, ವ್ಯಾಪಾರಸ್ಥರು, ಭಕ್ತರು ಸಹ ಶುಚಿತ್ವಕ್ಕೆ ಆಧ್ಯತೆ ನೀಡಬೇಕು. ಪ್ಲಾಸ್ಟಿಕ್ ಮುಕ್ತ ಯಲ್ಲಮ್ಮನ ಗುಡ್ಡ ನಿರ್ಮಾಣಕ್ಕೆ ಈ ಅಭಿಯಾನ ನಡೆಸುತ್ತಿದ್ದೆವೆ, ಶ್ರೀಕ್ಷೇತ್ರದಲ್ಲಿನ ಪ್ರತಿಯೊಂ ದು ಅಂಗಡಿಗಳಿಗೆ ತೇರಳಿ ಜಾಗೃತಿ ಮೂಡಿಸುತ್ತಿದ್ದೆವೆ ಇದಕ್ಕೆ ಪ್ರತಿಯೊಬ್ಬರಿಂದ ಉತ್ತಮ ಸ್ಪಂದನೆ ದೊರೆಯುತ್ತಿದೆ ಎಂದ ಪ್ರಭಾವತಿ ಫಕೀರಪೂರ ಅವರು ಮುಂದೆ ಬರುವ ದಿನಗಳಲ್ಲಿ ಸಂಪೂರ್ಣವಾಗಿ ಯಲ್ಲಮ್ಮನ ದೇವಸ್ಥಾನವನ್ನು ಪ್ಲಾಸ್ಟಿಕ್ ಮುಕ್ತ ದೇವಸ್ಥಾನವನ್ನಾಗಿ ಮಾಡಲಾಗುವುದು ಎಂದರು. ಅಲ್ಲಮಪ್ರಭು ಪ್ರಭುನವರ, ಶೀತಲ ಕಡಟ್ಟಿ, ಬೆಳಗಾವಿಯ ಶಿವು ನಂದಗಾಂವಿ ದೇವಸ್ಥಾನದ ಸಿಬ್ಬಂದಿ ಇದ್ದರು.

# ಬಿಡಾಡಿ ದನಗಳಿಂದ ತೊಂದರೆ; ಕಟ್ಟುನಿಟ್ಟಿನ ಕ್ರಮ ನಿರ್ಧಾರ



ಶ್ರೀ ರೇಣುಕಾ ಯಲ್ಲಮ್ಮನ ಗುಡ್ಡದಲ್ಲಿ ಭಕ್ತರ ಮಧ್ಯ ಎಲ್ಲೆಂದರಲ್ಲಿ ದನಗಳೆ ಕಾಣಿಸುತ್ತಿರುವುದು.

**ಬೆಳಗಾವಿ ವಾರ್ತೆ ಉಗರಗೋಳ:** ಸಪ್ತಗುಡ್ಡ, ಸಪ್ತಕೊಳ್ಳಗಳ ನಡುವೆ ನೇಲೆ ನಿಂತ ಎಳುಕೊಳ್ಳದ ಶ್ರೀರೇಣುಕಾ ಯಲ್ಲಮ್ಮನ ಗುಡ್ಡಕ್ಕೆ ಪ್ರತಿ ವರ್ಷ ಕೋಟ್ಯಾಂತರ ಭಕ್ತರು ಬಂದು ಶ್ರೀದೇವಿಯ ದರ್ಶನ ಆಶೀರ್ವಾದ ಪಡೆದುಕೊಂಡು ಹೂಗಾತ್ತಾರೆ.

ದೇವಸ್ಥಾನಕ್ಕೆ ಆಗಮಿಸುತ್ತಿರುವ ಭಕ್ತರಿಂದ ಹಲವಾರು ಬಾರಿ ಬಿಡಾಡಿ ದನಗಳ ಬಗೆಗೆ ಯಲ್ಲಮ್ಮನ ಕಛೇರಿಯಲ್ಲಿ ದೂರುಗಳು ದಾಖಲಾಗಿದ್ದು ದೇವಸ್ಥಾನದ ಆವರಣ ಹಾಗೂ ಯಲ್ಲಮ್ಮನ ಗುಡ್ಡದ ಎಲ್ಲ ಸ್ಥಳಗಳಲ್ಲಿ ಧನ–ಕರುಗಳು ಬೇಕಾಬಿಟ್ಟಿಯಾಗಿ ಅಡ್ಡಾಡುತ್ತಿರುವುದರಿಂದ ಭಕ್ತರಿಗೆ ತೊಂದರೆಯಾಗುತ್ತಿದ್ದು. ಪದೆ ಪದೆ ಭಕ್ತರ ಮೇಲೆ ಹಾಗೂ ವಯೋವೃದ್ಧರ ಮೇಲೆ ದಾಳಿ ಮಾಡುತ್ತಿದ್ದು ಇದರಿಂದಾಗಿ ಮೇಲಿಂದ ಮೇಲೆ ಭಕ್ತರು ಭಯದ ವಾತಾವರಣದಲ್ಲಿ ಗುಡ್ಡಕ್ಕೆ ಬಂದು ಹೊಗುವಂತಾಗಿದ್ದು ಜಾನುವಾರುಗಳ ಮಾಲಿಕರು ಒಂದು ವಾರದೊಳಗೆ ತಮ್ಮ ತಮ್ಮ ಜಾನುವಾರುಗಳನ್ನು ತಗೆದುಕೊಂಡು ಹೋಗತಕ್ಕದ್ದು.

ಇಲ್ಲವಾದರೆ, ಸದರಿ ಎಲ್ಲ ಜಾನುವಾರಗಳನ್ನು ಬೀದಿ ಜಾನುವಾರುಗಳು ಅಂತಾ ಪರಿಗಣಿಸಿ ಸರ್ಕಾರಕ್ಕೆ ಕಬ್ಜಾ ತಗೆದುಕೊಂಡು ಜಾನುವಾರುಗಳ ಮಾಲಿಕರ ಮೇಲೆ ಬಿಎನ್ಎಸ್ ಕಾಯ್ದೆಯಡಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು ಎಂದು ಶ್ರೀರೇಣುಕಾ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾದಿಕಾರದ ಕಾರ್ಯಧರ್ಶಿ ಪ್ರಭಾವತಿ ಫಕೀರಪೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆಯ ಕುರಿತು ಜರುಗಿದ ಕ್ರಿಯಾ ಯೋಜನೆ ತರಬೇತಿ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಧಾರವಾಡ:** ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ (ಎಂಪ್ರಿ) ಯು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಕರ್ನಾಟಕ ಸರ್ಕಾ ರದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿ ರುವ ಸ್ವಾಯತ್ತ ಸಂಸ್ಥೆಯಾಗಿದ್ದು, ಕರ್ನಾಟಕ ಸರ್ಕಾರದ ನಿರ್ದೇಶನದಂತೆ ಹವಾಮಾನ ಬದಲಾಣೆಯ ಕುರಿತಾದ ಕರ್ನಾಟಕ ರಾಜ್ಯ ಕ್ರಿಯಾ ಯೋಜನೆಯನ್ನು ತಯಾರಿಸಿ, 2024ರಲ್ಲಿ ಕೇಂದ್ರ ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾಣೆ ಮಂತ್ರಾಲಯದಿಂದ ಅನುಮೋದನೆ ಗೊಂಡಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಹೇಳಿದರು.

ಅವರು ಮೇ 08, 2026 ರಂದು ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆಯ ಕುರಿತು ಜರುಗಿದ ಕ್ರಿಯಾ ಯೋಜನೆ ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಹವಾಮಾನ ಬದಲಾಣೆಯ ವರದಿಯಲ್ಲಿನ ಕಾರ್ಯ ಅಂಶಗಳನ್ನು ಆಧಾರವಾಗಿಟ್ಟುಕೊಂಡು ವಿವಿಧ ಇಲಾಖೆಗಳು ಪ್ರಮುಖ ಕಾರ್ಯಕ್ಷಮತೆ ಸೂಚಕಗಳನ್ನು 2025–2030ರ ಅವಧಿಗೆ ಗುರಿಗಳೊಂದಿಗೆ ನಿಗದಪಡಿಸಿವೆ. ಸೂಚಕಗಳ ಅನುಷ್ಠಾನ ಕುರಿತು ಜಿಲಾಮಟ್ಟದ ಅಧಿಕಾರಿ ವರ್ಗ ಹಾಗೂ ಇತರೆ ಸಂಘ ಸಂಸ್ಥೆಗಳ ಸಾಮರ್ಥ್ಯ ಬೆಳವಣಿಗೆ ಉದ್ದೇಶದೊಂದಿಗೆ ಸಂಸ್ಥೆಯು ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯವರ ಸಹಯೋಗದೊಂದಿಗೆ ಸಂಸ್ಥೆಯು 2026–27 ನೇ ಸಾಲಿನಲ್ಲಿ ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲಿ ಸದರಿ ವಿಷಯವನ್ನು ವಿಸ್ತೃತಗೊಳಿಸಿದೆ ಎಂದು ಅವರು ಹೇಳಿದರು.

ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಒಳಗೊಂಡಂತೆ ಹಲವು ಕ್ಷೇತ್ರಗಳ ಸಂಘ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು ಹಾಗೂ ಇತರೆ ಪಾಲುದಾರುಗಳ ಪ್ರತಿನಿಧಿಗಳಿಗೆ ತರಬೇತಿಯನ್ನು ಆಯೋಜಿಸಲಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಡಾ. ರಾಜೇಂದ್ರ ಪೋದಾರ್, ಡಾ. ಪ್ರಕಾಶ್ ಭಟ್, ಹವಾಮಾನ ಬದಲಾವಣೆ ಕೇಂದ್ರ (ಎಂಪ್ರಿ) ಹಿರಿಯ ಸಮಾಲೋಚಕ ಡಾ. ಬಿ. ಸರಿತ, ಬೆಂಗಳೂರು ಜಲ ಸಂಪನ್ಮೂಲ ಇಲಾಖೆ ಪರಿಣಿತೆ ಡಾ. ಉಷಾ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ತರಬೇತಿ ಸಹಾಯಕರಾದ ಜಗದಾಂಬ.ಬಿ.ಆರ್ ಮತ್ತು ವಿವಿಧ 34 ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಹಲವು ಕ್ಷೇತ್ರಗಳ ಸಂಘ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು ಹಾಗೂ ಇತರೆ ಪಾಲುದಾರ ಪ್ರತಿನಿಧಿಗಳು ಉಪಸ್ಥಿತರಿದ್ದರು.

ತರಬೇತಿ ಆಯೋಜನೆಗೆ ನೈಸರ್ಗಿಕ ಸಂಪನ್ಮೂಲಗಳ ದತ್ತಾಂಶ ನಿರ್ವಹಣಾ ಕೇಂದ್ರ ಅಧಿಕಾರಿ ಪ್ರತಿಭಾ ವಿ ಹುಬ್ಬಳ್ಳಿ ಅವರು ಸಹಕಾರ ನೀಡಿದರು. ಸಂಸ್ಥೆಯ ಸಿಬ್ಬಂದಿ ಲತ. ಎಂ.ಹೆಚ್, ಅವರು ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

# ಬೇಸಿಗೆ ರಂಗ ಶಿಬಿರ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಮಕ್ಕಳಿಗೆ ರಂಗ ಭೂಮಿಯಲ್ಲಿ ಆಸಕ್ತಿ ಮೂಡಿಸಲು ತಿಂಗಳ ಕಾಲ ನಿನಾದ ಮಕ್ಕಳ ಬೇಸಿಗೆ ರಂಗ ಶಿಬಿರವನ್ನು ಶೇಷಶ್ರೀ–ನಿನಾದ ಫೌಂಡೇಶನ್ ವತಿಯಿಂದ ಆಯೋಜಿಸಲಾಗಿತ್ತು. ಮಕ್ಕಳಿಂದ ಭೀಮ ಕಥಾನಕ ಎಂಬ ನಾಟಕ ಪ್ರದರ್ಶನ ಹಾಗೂ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮಕ್ಕಳಿಗೆ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು. ಉತ್ತರ ಕರ್ನಾಟಕ ಲೇಖಕಿಯರ ಸಂಘದ ಧಾರ ವಾಡ ಘಟಕ ಅಧ್ಯಕ್ಷ , ಸಾಹಿತಿ ರೂಪಾ ಜೋಶಿ, ಯೋಗಗುರು ಮುತ್ತಪ್ಪ ನಲವಡಿ, ದಂತ ಶಸ್ತ್ರ ಚಿಕಿತ್ಸಕ ವೈದ್ಯ ಡಾ ಯಶೋದಾ ಜಿ. ದೇವರಪತಿ , ಅವರು ಅತಿಥಿ ಗಳಾಗಿ ಭಾಗವಹಿಸಿದ್ದರು. ಸುಜಯ್ ಸುರೇಶ್ ಹೊರಕೇರಿ, ಸೋಹನ್ ಸುರೇಶ್ ಹೊರಕೇರಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ , ಕರ್ನಾಟಕ ಜ್ಞಾನ ವಿಜ್ಞಾನ ಸಮಿ ತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಅದಿತಿ ಶೇಷಶಾಯಿ, ಮಂಗಳಾ ಮಾರಣ್ಣ, ಪಾಲಕರು, ಮಕ್ಕಳು, ರಂಗಾಸಕ್ತರು, ಮುಂತಾದವರು ಇದ್ದರು. ಮಕ್ಕಳು ಭೀಮ ಕಥಾನಕ ಎಂಬ ನಾಟಕವನ್ನುಉತ್ತಮ ರೀತಿಯಲ್ಲಿ ಪ್ರದರ್ಶನ ಮಾಡಿದರು. ನಾಟಕಕ್ಕೆ ನಿರ್ದೇಶನ ಹಾಗೂ ರಂಗ ವಿನ್ಯಾಸ ವನ್ನು ನಟ, ರಂಗ ನಿರ್ದೇಶಕ ಮಾರಣ್ಣ ಬಿ ಆರ್ ಅವರು ಮಾಡಿದರು. ರಂಗ ಸಜ್ಜಿಕೆ ಹಾಗೂ ರಂಗ ಪರಿಕರಗಳ ಜವಾಬ್ಧಾರಿ ಯನ್ನು ಚಿತ್ರಕಲಾ ಶಿಕ್ಷಕ ಎಂ ವೈ ಬಡಿಗೇರ್ ನಿರ್ವಹಿಸಿದರು. ಶಿಬಿರದ ಸಂಘಟಕ, ಶೇಷಶ್ರೀ–ನಿನಾದ ಫೌಂಡೇಶನ್‌ನ ಶೇಷಶಾಯಿ ಬಿ. ಜಿ ಅವರು ಸಮಾರಂಭವನ್ನು ಅಚ್ಚುಕಟ್ಟಾಗಿ ನೆರವೇರಿಸಿದರು. ಸಂಗೀತ ಕಲಾವಿದ ವೆಂಕಟೇಶ್ ಭಂಡಾರಿ ಅವರು ನಿರೂಪಿಸಿದರು.

# ನೀರು ಪೂರೈಕೆಗೆ ಆಗ್ರಹಿಸಿ ಪ್ರತಿಭಟನೆ

**ಬೆಳಗಾವಿ ವಾರ್ತೆ ಬಂಕಾಪುರ:** ಹಾವೇರಿ ಜಿಲ್ಲೆಯ ಶಿಗ್ಗಾವಿ ತಾಲೂಕಿನ ಬಂಕಾಪುರ್ ಪಟ್ಟಣದಲ್ಲಿ ನೀರಿಗಾಗಿ ಸ್ಥಳೀಯ ಮಹಿಳೆಯರು ಖಾಲಿ ಬಿಂದಿಗೆ ಹಿಡಿದುಕೊಂಡು ಪುರಸಭೆ ಎದಿರು ಪ್ರತಿಭಟನೆ ನಡೆಸಿದರು. ಪುರಸಭೆಯವರು ಒಂದು ತಿಂಗಳಿಂದ . ಸರಿಯಾಗಿ ನೀರನ್ನು ಪೋರಿಸಿಲ್ಲ ಎಂದು ಪುರಸಭೆ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. 6ನೇ ವಾರ್ಡಿನಲ್ಲಿ ಯಾವುದೇ ನೀರಿನ ಟ್ಯಾಂಕ್,ಬೋರ್ವೆಲ್ ವ್ಯವಸ್ಥೆ ಇಲ್ಲ ಒಂದು ತಿಂಗಳಿಂದ ನೀರು ಬಿಟ್ಟಿರುವುದಿಲ್ಲ. ಸ್ಥಿತಿವಂತರು ದುಡ್ಡು ಕೊಟ್ಟು ನೀರು ಹಾಕಿಸಿಕೊಳ್ಳುತ್ತಾರೆ. ಕೂಲಿ ನಾಲಿ ಮಾಡಿ ಬದುಕುವ ಬಡವರು ನೀರಿಗಾಗಿ ಎಲ್ಲಿಂದ ಹಣ ತರಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು. 6ನೇ ವಾರ್ಡಿನ ಪುರಸಭೆ



ಸದಸ್ಯ ರಮೇಶ್ ಸಿದ್ದನವರ್ ಮಾತನಾಡಿ ನಮ್ಮ ವಾರ್ಡಿಗೆ ಸರಿಯಾಗಿ ನೀರಿನ ವ್ಯವಸ್ಥೆ ಮಾಡಬೇಕು. ಇಲ್ಲದಿದ್ದರೆ ಹೋರಾಟ ದಾರಿ ಹಿಡಿಯಬೇಕಾಗುತ್ತದೆ ಎಂದರು.

ಪುರಸಭೆ ಅಧಿಕಾರಿ ಬಿ.ಎಸ್. ಗಿಡ್ಡಣ್ಣವರ್ ಪ್ರತಿಭಟನಾಕಾರರೊಂದಿಗೆ ಮಾತನಾಡಿ 6ನೇ ವಾರ್ಡಿಗೆ ತುಳಜಾ ಭವಾನಿ ದೇವಸ್ಥಾನದ ಹತ್ತಿರ ಹಾಗೂ ಜಾಡಗಪ್ಪದ ಓಣಿ ಒಳಗೆ ಪುರಸಭೆಯಿಂದ ವ್ಯವಸ್ಥೆ ಕಲ್ಪಿಸಲಾಗುವುದು. ಅಲ್ಲಿಯವರೆಗೆ ಟ್ಯಾಂಕರ್ ಮೂಲಕ ನೀರಿನ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು.

# ದೇಶಸೇವೆಯೇ ಈಶಸೇವೆ: ಅಭಿನವ ಬಸವಣ್ಣಜ್ಜನವರು



**ಬೆಳಗಾವಿ ವಾರ್ತೆ ಕುಂದಗೋಳ:** ಮಳೆ, ಬಿಸಿಲು, ಗಾಳಿ, ಚಳಿಯನ್ನು ಲೆಕ್ಕಿಸದೇ ಹಗಲಿರುಳು ದೇಶದ ಗಡಿಯನ್ನು ಕಾಯುತ್ತಾ ಭಾರತಮಾತೆಯ ಸೇವೆ ಸಲ್ಲಿಸುವ ಸೈನಿಕರ ತ್ಯಾಗ ಮತ್ತು ಸೇವೆ ಅತ್ಯಂತ ಅಮೂಲ್ಯವಾದುದು ಎಂದು ಕುಂದಗೋಳ ಕಲ್ಯಾಣಪುರಮಠದ ಅಭಿನವ ಬಸವಣ್ಣಜ್ಜನವರು ಹೇಳಿದರು. ತಾಲೂಕಿನ ಚಿಕ್ಕನರ್ತಿ ಗ್ರಾಮದಲ್ಲಿ ಅಶ್ವಮೇಧ ಗೆಳೆಯರ ಬಳಗ ಹಾಗೂ ಸರ್ವೋದಯ ಮಹಿಳಾ ಗ್ರಾಮ ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ನಿವೃತ್ತ ಯೋಧ ಹನುಮಂತಪ್ಪ ರೊಟ್ಟಿ ಗವಾಡರ ಸನ್ಮಾನ ಹಾಗೂ ಎಸ್ಎಸ್ ಎಲ್‌ಸಿ, ಪಿಯುಸಿ ಪರೀಕ್ಷೆಗಳಲ್ಲಿ ಅತ್ಯುತ್ತಮ ಅಂಕ ಗಳಿಸಿದ ಸಾಧಕ ವಿದ್ಯಾರ್ಥಿಗಳ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಚಿಕ್ಕನರ್ತಿ ಗ್ರಾಮದ ಹನುಮಂತಪ್ಪ ರೊಟ್ಟಿಗವಾಡ ಅವರು ದೇಶಸೇವೆ ಸಲ್ಲಿಸಿ ಸ್ವಗ್ರಾಮಕ್ಕೆ ಮರಳಿರುವುದು ಗ್ರಾಮಕ್ಕೆ ಹೆಮ್ಮೆಯ ಸಂಗತಿ. ದೇಶ ಸೇವೆಯೇ ಈಶ ಸೇವೆ ಎಂಬ ಭಾವನೆಯಿಂದ ಪ್ರಾಣದ ಹಂಗು ತೊರೆದು ಗಡಿ ಕಾಯುವ ಸೈನಿಕರನ್ನು ಪ್ರತಿಯೊಬ್ಬರೂ ಗೌರವಿಸಬೇಕು ಎಂದು ಶ್ರೀಗಳು ಹೇಳಿದರು. ಚನ್ನವೀರಯ್ಯ ಮಠದ, ಅಪ್ಪಣ್ಣ ನದಾಫ್, ಗುರುಪಾದ ಸ್ವಾದಿ, ಸಂಜೀವ ಸೋಮರೆಡ್ಡಿ, ಅಣ್ಣಪ್ಪ ದೇವನೂರು, ಬಸವ ರಾಜ ಅರಳಿಕಟ್ಟಿ, ರವಿ ಮುಳ್ಳೊಳ್ಳಿ, ಪ್ರಕಾಶ್ ಬಿಳೇಬಾಳ, ಅಣ್ಣ ಪ್ಪ ಬಿಳೇಬಾಳ, ಬಸವ ರಾಜ್ ಪಾಟೀಲ್, ಚಂದ್ರು ಶಾನ ವಾಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಯುದ್ಧ ಮುಗಿಯದ ಹಿನ್ನೆಲೆ ಪ್ರಧಾನಿ ಮಿತವ್ಯಯದ ಸಂದೇಶ



**ಬೆಳಗಾವಿ ವಾರ್ತೆ ಗದಗ:** ಇಸ್ರೇಲ್, ಅಮೆರಿಕಾ, ಇರಾನ್ ಯುದ್ಧ ಮುಗಿಯದ ಕಾರಣ ಮುಂಜಾ ಗ್ರತಾ ಕ್ರಮವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಪೆಟ್ರೋಲ್, ಡೀಸೆಲ್ ಮಿತವ್ಯ ಯದ ಸಂದೇಶ ಕೊಟ್ಟಿದ್ದಾರೆ. ಕಾಂಗ್ರೆಸ್ ನವರಿಗೆ ತ್ಯಾಗ, ದೇಶ ಭಕ್ತಿ ಅನ್ನುವುದೇ ಗೊತ್ತಿಲ್ಲ. ಕಾಂಗ್ರೆಸ್‌ನವರಿಗೆ ಜನ ಮಾನಸ ದಲ್ಲಿ ದೇಶ ಭಕ್ತಿ ಆಳವಾಗಿ ಊರಿದೆ ಎಂಬುದು ಗೊತ್ತಿಲ್ಲ ವಿರೋಧ ಮಾಡು ವುದರ ಸಲುವಾಗಿ ವಿರೋಧ ಮಾಡುತ್ತಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ಗದುಗಿನಲ್ಲಿ ಮಾಧ್ಯಮಗಳೊಂ ದಿಗೆ ಮಾತನಾಡಿದ ಅಂತಾರಾಷ್ಟ್ರೀಯ ಮಟ್ಟದಲ್ಲಿ ಇರಾನ್ ಇಸ್ರೇಲ್, ಅಮೆರಿಕಾ ಯುದ್ಧ ನಡೆಯುತ್ತಿದೆ. ಗಲ್ಫ್ ರಾಷ್ಟದ ಯುದ್ಧ ಮುಗಿಯುವಂತೆ ಕಾಣುತ್ತಿಲ್ಲ. ಉಕ್ರೇನ್ ರಷ್ಯಾ ಯುದ್ಧ ಆದಾಗ ಬಹಳಷ್ಟು ಸಮಸ್ಯೆ ಆಗಿತ್ತು. ರಸಗೊಬ್ಬರ ಕಚ್ಚಾವಸ್ತುಗಳ ಸಮಸ್ಯೆ ಆಗಿತ್ತು. ಈಗ ಪೆಟ್ರೋಲ್, ಡಿಸೇಲ್, ಆಯಿಲ್ ಸಮಸ್ಯೆ ಆಗುತ್ತಿದೆ. ಇರಾನ್ ದೇಶದ ಮೇಲೆ ಅವಲಂಬಿತವಾಗಿದ್ದೇವೆ. ಇಷ್ಟು ದಿನ ನರೇಂದ್ರ ಮೋದಿ ಅವರು ಅಂತಾರಾಷ್ಟ್ರೀಯ ಮಟ್ಟದ ವ್ಯಕ್ತಿತ್ವ ಉಪ ಯೋಗಿಸಿ ಕಳೆದ ಎರಡು ತಿಂಗಳು ಪೆಟ್ರೋ ಲ್ ಡಿಸೇಲ್, ಗ್ಯಾಸ್ ಸಮಸ್ಯೆ ಆಗದಂತೆ ನೋಡಿದ್ದರು. ಆಯಿಲ್ ಕಂಪನಿಗಳು ನಷ್ಟದಲ್ಲಿ ವಿತರಣೆ ಮಾಡಿದ್ದಾರೆ ಯುದ್ಧ ಮುಗಿಯುತ್ತೇ ಎಂಬ ನಂಬಿಕೆ ಇತ್ತು. ಆದರೆ, ಯುದ್ಧ ಮುಗಿದಿಲ್ಲ. ಬರುವ ದಿನಗಳಲ್ಲಿ ಪೆಟ್ರೋಲ್ ಡಿಸೇಲ್ ಗ್ಯಾಸ್ ಸಂಕಷ್ಟ ಬರಬಹುದು. ಅಂತಾರಾಷ್ಟ್ರೀಯ ಮಟ್ಟದಲ್ಲಿ ದರಗಳು ಹತ್ತು ಪಟ್ಟು ಹೆಚ್ಚಿಗೆ ಆಗಿವೆ. ಅಮೆರಿಕಾ, ಶ್ರೀಲಂಕಾ, ಮಲೇಷಿ ಯಾ,, ಪಾಕಿಸ್ತಾನ ಸೇರಿದಂತೆ ಹಲವು ರಾಷ್ಟದಲ್ಲಿ ದರ ಏರಿಕೆ ಆಗಿದೆ. ಭಾರತ ದರ ಹೆಚ್ಚಿಗೆ ಆಗದೆ ಇರುವ ದೇಶವಾಗಿದೆ. ಮುಂಜಾಗ್ರತಾ ಕ್ರಮವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಸಂದೇಶ ಕೊಟ್ಟಿದ್ದಾರೆ ಎಂದರು. ಜನರು ನಮ್ಮ ಮಿತ ವ್ಯಯದಲ್ಲಿ ಬಳಕೆ ಮಾಡಬೇಕು. ನಮ್ಮ ಮೇಲೆ ಬರುವ ದೊಡ್ಡ ಬಾರ, ಹಣದುಬ್ಬರವನ್ನ ನಿಲ್ಲಿಸಬಹು ದಾಗಿದೆ. ಸುಲಭವಾಗಿ ಮಾಡಬಹುದಾಗಿದೆ. ಬಂಗಾರ ಖರೀದಿ ಮಾಡುವದ್ರಿಂದ ವಿದೇಶಿ ತೆರಿಗೆ ಹೊಡೆತ ಬೀಳುತ್ತಿದೆ. ಹೀಗಾಗಿ ಒಂದು ವರ್ಷ ಬಂಗಾರ ಖರೀದಿ ನಿಲ್ಲಿಸದಿದ್ದರೆ ಏನೂ ಆಗುವುದಿಲ್ಲ. ಇನ್ನು ಪೆಟ್ರೋಲ್ ಡಿಸೇಲ್ ಮಿತವ್ಯಯವಾಗಿ ಬಳಕೆ ಮಾಡಬೇಕು. ರಸಗೊಬ್ಬರ ಬಳಕೆ ಕಡಿಮೆ ಮಾಡಿ ಸಾವಯವ ಗೊಬ್ಬರ ಬಳಕೆ ಮಾಡಿ ಎಂದಿದ್ದಾರೆ. ಇನ್ನು ವಿದೇಶ ಪ್ರಯಾಣ ಸಹ ಕಡಿಮೆ ಮಾಡಬೇಕು ಎಂದಿದ್ದಾರೆ ದೇಶಕ್ಕಾಗಿ ಇಷ್ಟಾದರೂ ನಾವು ಮಾಡಬೇಕಿದೆ ಎಂದು ಹೇಳಿದರು. **ನೈತಿಕ ಬಲ:** ಈ ಹಿಂದೆ ಭಾರತ ಪಾಕಿಸ್ತಾನ ಯುದ್ಧ ಆದಾಗ ಆಹಾರ ಕೊರತೆ ಆಗಿತ್ತು. ಆಗಿನ ಪ್ರಧಾನಿ ಲಾಲ್ ಬಹಾದ್ದೂರ್ ಶಾಸ್ತ್ರಿ ಅವರು ಒಂದು ದಿನ ಉಪವಾಸ ಮಾಡಿ ಎಂದಿದ್ದರು. ಒಬ್ಬ ನಾಯಕನ ನೈತಿಕ ಬಲವಿದ್ದಾಗ ಮಾತ್ರ ಹೇಳಲು ಆಗುತ್ತದೆ. ಇದು ಕಾಂಗ್ರೆಸ್‌ನವರಿಗೆ ಅರ್ಥ ಆಗುದಿಲ್ಲ. ಹಿಂದೆ ಇರಾಕ್ ವಾರ್ ಆಗಿತ್ತು. ಆಗ ಮೂರೇ ದಿನದಲ್ಲಿ ಪೆಟ್ರೋಲ್ ಡಿಸೇಲ್ ಖಾಲಿ ಆಗಿತ್ತು. ಗದಗದಿಂದ ದಿಲ್ಲಿವರೆಗೂ ಪೆಟ್ರೋಲ್ ಬಂಕ್ ಮುಂದೆ ಕಿಲೋ ಮೀಟರ್ ಗಟ್ಟಲೇ ವಾಹನಗಳು ನಿಂತಿದ್ದವು ಎಂದು ಹೇಳಿದರು.

# ಶಕುಂತಲಾ ದಂಡಿನ ಅವರ ನಿಧನಕ್ಕೆ ಗಣ್ಯರಿಂದ ಸಂತಾಪ



**ಬೆಳಗಾವಿ ವಾರ್ತೆ ಗದಗ :** ಭಾರತೀಯ ಆಹಾರ ನಿಗಮದ ರಾಜ್ಯ ನಿರ್ದೇಶಕರು ಹಾಗೂ ಬಿಜೆಪಿಯ ಮುಖಂಡರಾದ ರವಿ ದಂಡಿನ ಅವರ ಮಾತೋಶ್ರೀ ಶಕುಂತಲಾ ದಂಡಿನ ಅವರು ಇತ್ತೀಚಿಗೆ ನಿಧನರಾದ ಹಿನ್ನಲೆಯಲ್ಲಿ ಸೋಮವಾರ ಅವರ ನಿವಾಸಕ್ಕೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ಅವರು ಬೇಟಿ ನೀಡಿ ಸಾಂತ್ವಾನ ಹೇಳಿದರು.

ಅದೇರೀತಿ ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿ, ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ.ವಿಜಯೇಂದ್ರ, ಸಿ.ಟಿ.ರವಿ, ಸಿ.ಸಿ.ಪಾಟೀಲ, ಬಿ. ಶ್ರೀರಾಮುಲು, ಎಸ್.ಎಸ್. ಪಾಟೀಲ, ಮಹೇಶ ಟೆಂಗಿನಕಾಯಿ, ಎನ್. ರವಿಕುಮಾರ, ಕೆ.ಎಸ್.ಈಶ್ವರಪ್ಪ, ಅರವಿಂದ ಬೆಲ್ಲದ, ಜಯತೀರ್ಥ ಕಟ್ಟಿ, ಡಾ. ಚಂದ್ರು ಲಮಾಣಿ, ಡಿ.ಆರ್. ಪಾಟೀಲ, ಬಿ.ಬಿ.ಚಿಮ್ಮನಕಟ್ಟಿ ಸಾಂತ್ವಾನ ಹೇಳಿದರು.

ಈ ಸಂದರ್ಭದಲ್ಲಿ ರಾಜು ಕುರಡಗಿ, ಫಕ್ಕಿರಪ್ಪ ಹೆಬಸೂರ, ರುದ್ರಣ್ಣ ಗುಳಗುಳಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ವಿದ್ಯಾರ್ಥಿ ಸಾವು ಪ್ರಚಾರಕ್ಕೆ ಸೀಮಿತವಾಯ್ತೆ .?

**ಬೆಳಗಾವಿ ವಾರ್ತೆ ಧಾರವಾಡ:** ಪೊಲೀಸರ ಕಿರುಕುಳದಿಂದ ಇತ್ತೀಚೆಗೆ ವಿದ್ಯಾರ್ಥಿ ನೇಣಿಗೆ ಶರಣಾದ ಘಟನೆ ಇಡೀ ಧಾರವಾಡ ಜನತೆ ಮರೆಯುವಂತಿಲ್ಲ. ಆದರೆ, ವಿದ್ಯಾರ್ಥಿ ಸಾವಿಗೆ ಭುಗಿಲೆದ್ದ ಜನಾಕ್ರೋಶ, ರಾಜಕಾರಣಿಗಳ ಕೆಸರೆರೆಚಾಟ ಕೇವಲ ರಾಜಕೀಯ ಕಿತ್ತಾಟ ಹಾಗೂ ಪ್ರಚಾರಕ್ಕೆ ಮಾತ್ರವೇ ಸೀಮಿತವಾಯ್ತೆ ಎಂಬ ಪ್ರಶ್ನೆ ಪ್ರಜ್ಞಾವಂತರಲ್ಲಿ ಕಾಡತೊಡಗಿದೆ.

ಹೌದು ಕಳೆದ ಏ. 27ರ ತಡರಾತ್ರಿ ಇಲ್ಲಿಯ ಗಿರಿನಗರದ ಮನೆಯಲ್ಲಿಯೇ ಬಾಗಲಕೋಟೆ ಜಿಲ್ಲೆ ಬಾದಾಮಿ ತಾಲೂಕಿನ ಬೇಲೂರ ಗ್ರಾಮದ ವಿದ್ಯಾರ್ಥಿ ಆದಿತ್ಯ ಮ್ಯಾಗೇರಿ ಆತ್ಮಹತ್ಯೆಗೆ ಶರಣಾಗಿದ್ದನು. ಗಾಂಜಾ ಸೇವನೆ ಪ್ರಕರಣದಲ್ಲಿ ಅನವಶ್ಯಕವಾಗಿ ಆದಿತ್ಯನನ್ನು ಬಂಧಿಸಿ ತಪಾಸಣೆಗೆ ಒಳಪಡಿಸಲಾಗಿತ್ತು. ಅಲ್ಲದೇ ನೆಗೆಟಿವ್ ರಿಪೋರ್ಟ್ ಬಂದರೂ ಪೊಲೀಸರು ಆತನನ್ನು ಹೆದರಿಸಿ ಹಣದ ಬೇಡಿಕೆ ಇಟ್ಟಿದ್ದರು ಎಂಬ ಆರೋಪ ಕೇಳಿಬಂದಿದ್ದವು.

ಆದಿತ್ಯ ಮೃತಪಟ್ಟ ಮರುದಿನವೇ ಬೃಹತ್ ಹೋರಾಟ ಸೇರಿದಂತೆ ಜನಾಕ್ರೋಶ ವ್ಯಕ್ತವಾದ ಹಿನ್ನೆಲೆಯಲ್ಲಿ ವಿದ್ಯಾಗಿರಿ ಪೊಲೀಸ್ ಠಾಣೆಯ ಮೂವರು ಪೇದೆಗಳು ಸೇರಿದಂತೆ ಇನ್ಸಪೆಕ್ಟರ್ ಅವರನ್ನೂ ಸಹ ಅಮಾನತು ಮಾಡಲಾಗಿತ್ತು. ಆದರೆ, ಇಂದಿನವರೆಗೆ ಸಾವಿಗೆ ಹೊಣೆ ಯಾರು ಎನ್ನುವುದೇ ತಿಳಿಯದಂತಾಗಿದೆ.

**ರಾಜಕೀಯ ಬಲಾಬಲ ಪ್ರದರ್ಶನ :** ಪೊಲೀಸರು ಕಿರುಕುಳ ನೀಡುತ್ತಿದ್ದಾರೆ ಎನ್ನುವುದೇ ತಡ ಎಚ್ಚೆತ್ತುಕೊಂಡಿದ್ದ ಜಿಲ್ಲೆಯ ನಾಯಕರು ಸಾಕಷ್ಟು ಹೇಳಿಕೆಗಳನ್ನು ನೀಡಿದರು. ಇದಲ್ಲದೇ ಶಾಸಕ ಅರವಿಂದ ಬೆಲ್ಲದ ಅವರು ಪೊಲೀಸ್ ಆಯುಕ್ತರ ಕಚೇರಿಯೇ ಅಕ್ರಮ ನಡೆಯುವ ಹಾಗೂ ಮಧ್ಯವರ್ತಿಗಳ ಕೇಂದ್ರವಾಗಿದೆ. ಇದಕ್ಕೆ ನೇರವಾಗಿ ಆಯುಕ್ತರೇ ಜವಾಬ್ದಾರರಾಗಿದ್ದು, ಮೊದಲು ಅವರ ಮೇಲೆ ಕ್ರಮವಾಗಬೇಕು. ಇದಕ್ಕೆ ಮೂರು ದಿನಗಳ ಗಡುವು ನೀಡಲಾಗುವುದು. ಸರಕಾರ ಒಂದು ವೇಳೆ ಅಕ್ರಮ ಚಟುವಟಿಕೆಗಳ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಬೀದಿಗಿಳಿದು ಹೋರಾಟ ಮಾಡುವ ಎಚ್ಚರಿಕೆ ನೀಡಿದ್ದರು. ಆದರೆ, ಗಡುವು ಮೀರಿದರೂ ಈ ವರೆಗೂ ಯಾವುದೇ ಕ್ರಮವಾಗಿಲ್ಲ, ಇತ್ತ ಶಾಸಕರೂ ಮೌನ ವಹಿಸಿರುವುದು ಯಾಕೆ ಎಂಬ ಪ್ರಶ್ನೆ ಜನರನ್ನು ಕಾಡುತ್ತಿದೆ.

ಇನ್ನೊಂದೆಡೆ ಶಾಸಕ ಪ್ರಸಾದ ಅಬ್ಬಯ್ಯ ಅವರು ಸಂತ್ರಸ್ತ ಕುಟುಂಬಸ್ಥರಿಗೆ ಭೇಟಿ ಮಾಡಿ ಸಾಂತ್ವನ ಹೇಳಿ ಪರಿಹಾರವನ್ನೂ ನೀಡಿದ್ದಲ್ಲದೇ ಇದರಲ್ಲಿ ಯಾರ್ಯಾರು ಶಾಮೀಲಾಗಿದ್ದಾರೆ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಗೃಹ ಸಚಿವರಿಗೆ ಮನವಿ ಮಾಡಲಾಗುವುದು, ಸರಕಾರ ನಿಮ್ಮ ಪರವಾಗಿದೆ ಎಂದೆಲ್ಲ ಹೇಳಿದ್ದರು. ಆದರೆ, ಇತ್ತ ಸರಕಾರದಿಂದಲೂ ಈ ವರೆಗೆ ಯಾವುದೇ ಕಠಿಣ ಕ್ರಮ ಆಗದಿರುವುದು ಶಾಸಕರ ಹೇಳಿಕೆ ಬರೀ ಸಂತೈಸುವುದಕ್ಕೆ ಮಾತ್ರ ಸೀಮಿತವಾಯ್ತೆ ಎಂದು ಅನುಮಾನಕ್ಕೀಡು ಮಾಡಿದೆ.

**ಅಮಾನತಿಗೆ ಮಾತ್ರ ಸೀಮಿತವೇ ?:** ಹು-ಧಾ ಅವಳಿನಗರದಲ್ಲಿ ಅಕ್ರಮ ಚಟುವಟಿಕೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಗಾಂಜಾ ಸೇರಿದಂತೆ ಇನ್ನಿತರೆ ಮಾದಕ ವಸ್ತುಗಳ ಹಾವಳಿ ಹೆಚ್ಚಾಗುತ್ತಲೇ ಸಾಗುತ್ತಿದೆ. ಆದರೆ, ಈ ರೀತಿಯ ಘಟನೆಗಳು ಆದಾಗ ಮಾತ್ರವೇ ಎಚ್ಚೆತ್ತುಕೊಳ್ಳುವ ಜನಪ್ರತಿನಿಧಿಗಳು ಮತ್ತು ಮೇಲಧಿಕಾರಿಗಳು ಭುಗಿಲೆದ್ದ ಆಕ್ರೋಶ ತಣ್ಣಗಾಗುತ್ತಿದ್ದಂತೆ ಅವರೂ ತಣ್ಣಗೆ ಕೂಡುತ್ತಿರುವುದು ನೋವಿನ ಸಂಗತಿ ಎಂದು ಸಮಾಜಮುಖಿ ಹಿತಚಿಂತಕರು ವಿಷಾದ ವ್ಯಕ್ತಪಡಿಸುತ್ತಿದ್ದಾರೆ.




ಪೊಲೀಸ್ ಆಯುಕ್ತರು ಅವಳಿನಗರವನ್ನು ಗಾಂಜಾ ಮುಕ್ತ ಮಾಡುವ ಶಪಥವನ್ನು ತೊಟ್ಟಿದ್ದರು. ಆದರೆ, ಅದು ಆಗಿದೆಯೇ ? ಅವಳಿನಗರದಲ್ಲಿ ಗಾಂಜಾ ಮಾರಾಟ ಸಂಪೂರ್ಣ ನಿಂತಿದೆಯೇ ? ಮಾರಾಟ ಮಾಡುವವರೆಲ್ಲರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗಿದೆಯೇ ಎಂಬ ಪ್ರಶ್ನೆಗಳು ಜನರಲ್ಲಿ ಮೂಡುತ್ತಿವೆ. ಆದರೆ, ಇದೆಲ್ಲದಕ್ಕೂ ತಾರ್ಕಿಕ ಅಂತ್ಯ ಯಾವಾಗ ಎನ್ನುವುದು ಮಾತ್ರ ಸ್ಪಷ್ಟವಾಗಬೇಕಿದೆ.



**ಬೆಳಗಾವಿ ವಾರ್ತೆ ಧಾರವಾಡ :** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿಯನ್ನು ಮೇ 10, 2026 ರಂದು ಬೆಳಿಗ್ಗೆ ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಚರಿಸಲಾಗಿತ್ತು ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಮಾಜದ ಮುಖಂಡರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಪ್ರಧಾನಿ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಬೇಡಿ: ಭೂಮರಡ್ಡಿ



**ಬೆಳಗಾವಿ ವಾರ್ತೆ ಕೊಪ್ಪಳ:** ಜಾಗತಿಕ ಸಂಕಷ್ಟದ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಸಲಹೆಯನ್ನು ಪಟ್ಟಭದ್ರ ಹಿತಾಸಕ್ತಿಗಳು ತಪ್ಪಾಗಿ ಅರ್ಥೈಸುತ್ತಿರುವುದು ದೇಶದ ಪ್ರಗತಿಗೆ ಪೂರಕವಲ್ಲ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಸುರೇಶ್ ಭೂಮರಡ್ಡಿ ಹೇಳಿದ್ದಾರೆ.

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷ ಜಗತ್ತಿನ ಪ್ರತಿಯೊಂದು ರಾಷ್ಟಕ್ಕೂ ಸಂಕಷ್ಟವನ್ನು ತಂದಿಟ್ಟಿದೆ. ಹಾಗೆ ನೋಡಿದರೆ ಬಹುತೇಕ ರಾಷ್ಟಗಳಲ್ಲಿ ಭೀಕರ ಪರಿಸ್ಥಿತಿ ಇದೆ. ಅಂತಹ ಪರಿಸ್ಥಿತಿ ನಮ್ಮ ದೇಶದಲ್ಲಿ ಇಲ್ಲ. ಈ ಸಂಘರ್ಷ ಕೊನೆಗೊಳ್ಳುವ ಲಕ್ಷಣ ಕಾಣುತ್ತಿಲ್ಲ. ಆದ್ದರಿಂದ ವಿದೇಶಿ ವಿನಿಮಯ ಸಂಗ್ರಹವನ್ನು ಉಳಿಸುವ ಸಲುವಾಗಿ ಮಿತವ್ಯಯದ ಕ್ರಮಗಳ ಅಗತ್ಯತೆಯನ್ನು ಪ್ರಧಾನಿಯವರು ಪ್ರತಿಪಾದಿಸಿದ್ದಾರೆ. ಈ ವಾಸ್ತವವನ್ನು ನಾವು ಸರಿಯಾಗಿ ಗ್ರಹಿಸಬೇಕು ಎಂದು ಪತ್ರಿಕಾ ಪ್ರಕಟಣೆಯಲ್ಲಿ ಅವರು ತಿಳಿಸಿದ್ದಾರೆ.

"ಸದೃಢ ಆರ್ಥಿಕತೆಗೆ ವಿದೇಶಿ ವಿನಿಮಯ ಹೆಚ್ಚಿನ ಪ್ರಮಾಣದಲ್ಲಿ ಮೀಸಲಿನಲ್ಲಿರಬೇಕು. ಆಮದು ಪ್ರಮಾಣ ಕಡಿಮೆಗೊಂಡರೆ ಹಾಗೂ ದೇಶದ ಸಂಪತ್ತು ದೇಶದಲ್ಲಿಯೇ ವ್ಯಯಗೊಂಡರೆ ಇದು ಸಾಧ್ಯ. ಇಲ್ಲದಿದ್ದರೆ ರೂಪಾಯಿ ಮೌಲ್ಯ ಕುಸಿತಗೊಂಡು ಆರ್ಥಿಕತೆಗೆ ಧಕ್ಕೆ ಉಂಟಾ ಗುತ್ತದೆ. ಮೋದಿಯವರು ವೆಚ್ಚ ಕಡಿಮೆ ಮಾಡಿ ಉಳಿತಾಯಕ್ಕೆ ಮಹತ್ವ ಕೊಡಿ ಎಂದು ಹೇಳಿದ್ದಾರೆಯೆ ಹೊರತು ತ್ಯಾಗ ಮಾಡಿ ಎಂದು ಹೇಳಿಲ್ಲ. ಅವರ ಈ ಸಲಹೆ ಯುದ್ಧ ಕೊನೆಗೊಂಡು ಸಹಜ ಸ್ಥಿತಿ ಮರಳುವ ತನಕ ಮಾತ್ರ ಎಂಬುದನ್ನು ಗಮನಿಸ ಬೇಕಿದೆ," ಎಂದು ಭೂಮರೆಡ್ಡಿ ವಿವರಿಸಿದ್ದಾರೆ.

ಡಾಲರ್ ಎದುರು ರೂಪಾಯಿ ಮೌಲ್ಯ ಕಡಿಮೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರತಿಯೊಬ್ಬ ಭಾರತೀಯನ ಮೇಲಿದೆ. ಪ್ರಧಾನಿಯವರ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಿಕೊಂಡು ಐಷಾರಾಮಿ ಬದುಕಿಗೆ ಪ್ರಚೋದಿಸುವ ವಿರೋಧ ಪಕ್ಷಗಳ ಹೇಳಿಕೆ ದೇಶದ ಆರ್ಥಿಕ ಭದ್ರತೆಗೆ ಬಹುದೊಡ್ಡ ಅಪಾಯ. ರಾಜಕೀಯ ವಿಷಯಗಳನ್ನು ಆಚೆಗಿಟ್ಟು ದೇಶದ ಹಿತ ದೃಷ್ಟಿಯಿಂದ ವಿಚಾರಿಸುವ ಸಮಯವಿದು ಎಂದು ಹೇಳಿದ್ದಾರೆ.

# ಹಂಪಿಯಲ್ಲಿ ಮಹಿಳಾ ಸುರಕ್ಷತೆ ಮತ್ತು ಭದ್ರತೆ ಕುರಿತು ವಿಶೇಷ ಜಾಗೃತಿ ಅಭಿಯಾನ




**ಬೆಳಗಾವಿ ವಾರ್ತೆ ವಿಜಯನಗರ (ಹೊಸಪೇಟೆ):** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಹಿಳಾ ಸಬಲೀಕರಣ ಘಟಕ, ಅಕ್ಕ ಪಡೆ ಹಾಗೂ ವಿಜಯ ಮಹಿಳಾ ಸುರಕ್ಷಾ ಪಡೆ ತಂಡಗಳ ಸಂಯುಕ್ತ ಆಶ್ರಯದಲ್ಲಿ ಹಂಪಿ ಗ್ರಾಮದ ಪ್ರಮುಖ ಸ್ಥಳಗಳಲ್ಲಿ ಮಹಿಳಾ ಸುರಕ್ಷತೆ ಮತ್ತು ಭದ್ರತೆಯ ಕುರಿತು ಸೋಮವಾರ ವಿಶೇಷ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ವಿಶ್ವ ಪಾರಂಪರಿಕ ತಾಣವಾದ ಹಂಪಿಯ ವಿರೂಪಾಕ್ಷ ದೇವಾಲಯ, ರಥ ಬೀದಿ ಹಾಗೂ ಬಸ್ ನಿಲ್ದಾಣದ ಸುತ್ತಮುತ್ತ ಸಾರ್ವಜನಿಕರು ಮತ್ತು ಪ್ರವಾಸಿ ಮಹಿಳೆಯರಿಗೆ ಸುರಕ್ಷತಾ ಕ್ರಮಗಳ ಬಗ್ಗೆ ಅರಿವು ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಜಿಲ್ಲಾ ಮಿಷನ್ ಸಂಯೋಜಕರಾದ ವಿದ್ಯಾ ಹಾಗೂ ಜೆಂಡರ್ ಸ್ಪೆಷಲಿಸ್ಟ್ ಅನ್ನಪೂರ್ಣ ಅವರು ಮಾತನಾಡಿ, ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳಾದ 'ಮಿಷನ್ ಶಕ್ತಿ', 'ಬೇಟಿ ಬಚಾವೋ ಬೇಟಿ ಪಡವೋ' ಮತ್ತು 'ಸಖಿ ಒನ್ ಸ್ಟಾಪ್ ಸೆಂಟರ್'ಗಳ ಸೌಲಭ್ಯಗಳನ್ನು ಮಹಿಳೆಯರು ಹೇಗೆ ಪಡೆದುಕೊಳ್ಳಬಹುದು ಎಂಬುದನ್ನು ವಿವರಿಸಿದರು. ಸಖಿ ಕೇಂದ್ರದ ನಿರ್ವಾಹಕಿ ಬಶೀರಾ ಬಿ ಅವರು ಸಂಕಷ್ಟದಲ್ಲಿರುವ ಮಹಿಳೆಯರಿಗೆ ಕೇಂದ್ರವು ನೀಡುವ ಆಸರೆಯ ಬಗ್ಗೆ ಮಾಹಿತಿ ನೀಡಿದರು.

ಯಾವುದೇ ಅಹಿತಕರ ಘಟನೆಗಳು ನಡೆದಾಗ ಅಥವಾ ತುರ್ತು ಸಂದರ್ಭದಲ್ಲಿ ಮಹಿಳಾ ಸಹಾಯವಾಣಿ: 181 ಪೊಲೀಸ್ ತುರ್ತು ಸೇವೆ: 112, ಮಕ್ಕಳ ಸಹಾಯವಾಣಿ: 1098, ಸೈಬರ್ ಕ್ರೈಂ ಸಹಾಯವಾಣಿ: 1930 ಗೆ ಸಂಪರ್ಕಿಸಬಹುದು. ಅಲ್ಲದೆ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆ ಕುರಿತು ತಂಡದ ಸದಸ್ಯರು ಸಾರ್ವಜನಿಕರಿಗೆ ತಿಳುವಳಿಕೆ ನೀಡಿದರು. ಅಕ್ಕ ಪಡೆ ಮತ್ತು ವಿಜಯ ಮಹಿಳಾ ಸುರಕ್ಷಾ ಪಡೆಯ ಸಿಬ್ಬಂದಿಗಳು ಸ್ಥಳದಲ್ಲಿದ್ದ ಮಹಿಳಾ ಪ್ರವಾಸಿಗರೊಂದಿಗೆ ಸಂವಹನ ನಡೆಸಿ, ಧೈರ್ಯ ತುಂಬಿದರು.

ಈ ಸಂದರ್ಭದಲ್ಲಿ ಇಲಾಖೆಯ ಸಿಬ್ಬಂದಿಗಳು, ಅಕ್ಕ ಪಡೆ ಹಾಗೂ ವಿಜಯ ಮಹಿಳಾ ಸುರಕ್ಷಾ ಪಡೆಯ ಸದಸ್ಯರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ಪಠ್ಯ ಪೂರಕ ಪರಿಕರಗಳ ವಿತರಣೆ

**ಬೆಳಗಾವಿ ವಾರ್ತೆ ಕೊಪ್ಪಳ:** ಎಸ್ ಎಸ್ ಎಲ್ ಸಿ ಮತ್ತು ಪಿ.ಯು. ದ್ವಿತೀಯ ಪರೀಕ್ಷೆ ಉತ್ತೀರ್ಣ ರಾದ ವಿದ್ಯಾರ್ಥಿಗಳಿಗೆ ಕರ್ನಾಟಕ ರಕ್ಷಣಾ ವೇದಿಕೆ ಶಿವರಾಮೇಗೌಡರ ಬಣದ ಜಿಲ್ಲಾ ಮಹಿಳಾ ಘಟಕದ ವತಿಯಿಂದ ಸನ್ಮಾನಿಸಿ,ಪಠ್ಯ ಪೂರಕ ಪರಿಕರಗಳನ್ನು ವಿತರಿಸಲಾಯಿತು.

ವೇದಿಕೆಯ ಜಿಲ್ಲಾಧ್ಯಕ್ಷ ಶಿವರಾಜ ಉಳ್ಳಾಗಡ್ಡಿ ಅವರ ಸಮ್ಮುಖದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಹಾಗೂ ನಿರ್ಗತಿಕ ಮಕ್ಕಳಿಗೆ ಬ್ಯಾಗ್, ಬುಕ್, ಪೆನ್, ಪೆನ್ಸಿಲ್ ಗಳನ್ನು ವಿತರಿಸಿ ಪ್ರೋತ್ಸಾಹಿಸ ಲಾಯಿತು. ಇದರೊಂದಿಗೆ ವಿಧವಾ ಮಹಿಳೆ ಯರಿಗೆ ಊಟದ ಬಾಕ್ಸಳನ್ನು ವಿತರಿಸಿ ನಿಮ್ಮೆಲ್ಲ ಸಂಕಷ್ಟಗಳ ಜೊತೆಗೆ ನಾವಿರುವು ದಾಗಿ ನೈತಿಕ ಬೆಂಬಲ ನೀಡಿದರು.

ಆಟೋ ಘಟಕದ ಜಿಲ್ಲಾಧ್ಯಕ್ಷ ಸಂಜಯದಾಸ್ ಕೌಜಗೇರಿ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ನಾಗರತ್ನ ಅಳವಂಡಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಪಠ್ಯಪೂರಕ ಪರಿಕರಗಳು ವಿತರಿಸಿ, ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಪ್ರೋತ್ಸಾಹಿಸಿದರು.

ವೇದಿಕೆಯ ಕೊಪ್ಪಳ ತಾಲೂಕು ಘಟಕದ ಪ್ರಧಾನ ಕಾರ್ಯದರ್ಶಿ ಶೇರು, ಸಾಮಾಜಿಕ ಹೋರಾಟಗಾರರಾದ ರಾಮ ಲಿಂಗ ನಾಯ್ಕ, ಶಾಸ್ತ್ರೀ ಮಠ, ಆಟೋ ಜಿಲ್ಲಾ ಘಟಕದ, ಯಲ್ಲಪ್ಪ



ಹಳ್ಳಿಕೇರಿ, ಕರವೇ ಜಿಲ್ಲಾ ಆಟೋ ಘಟಕ ಜಿಲ್ಲಾ ಅಧ್ಯಕ್ಷರು, ಜಿಲ್ಲಾ ಮಹಿಳಾ ಘಟಕದ ಪಧಾಧಿಕಾರಿಗಳು ಉಪಸ್ಥಿತರಿದ್ದ ಈ ವೇಳೆ ಪ್ರತಿಭಾ ಹಾಗೂ ಗದಗ ಜಿಲ್ಲೆಯ ಎಂ.ಬಿ.ನದಾಫ್ ವಕೀಲರು, ಕೊಪ್ಪಳ ಬಸವಶ್ರೀ ಗುರು ಪೀಠದ ಮಂಜುಳಾ ಬಸವಶ್ರೀ ಟ್ರಸ್ಟ್, ಪೂರ್ಣಿಮಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಬ್ಲಾಕ್ ಬೆಲ್ಟ್ ವಿತರಣೆ




**ಬೆಳಗಾವಿ ವಾರ್ತೆ ಕೊಪ್ಪಳ:** ನ್ಯಾಷನಲ್ ಶೋಟೊಖಾನ್ ಕರಾಟೆ ಅಸೋಷಿಯೇಷನ್ ಇಂಡಿಯಾ ವತಿಯಿಂದ ಮಹಾರಾಷ್ಟದ ನಾಗಪುರದಲ್ಲಿ ಮೇ–01 ರಿಂದ ಮೇ–03 ರವರೆಗೆ ತರಬೇತುದಾರರ ತರಬೇತಿ ಮತ್ತು ತೀರ್ಪುಗಾರರ ತಾಂತ್ರಿಕ ಕಾರ್ಯಗಾರವನ್ನು ಆಯೋಜಿಸಲಾಗಿತ್ತು.

ಈ ಕಾರ್ಯಗಾರದಲ್ಲಿ ತರಬೇತುದಾರರಿಗೆ ಬ್ಲಾಕ್ ಬೆಲ್ಟ್ ಪರೀಕ್ಷೆ ನಡೆಸಲಾಯಿತು.

ಈ ತರಬೇತಿ ಮತ್ತು ಪರೀಕ್ಷೆಯಲ್ಲಿ ಕೊಪ್ಪಳದಿಂದ ಭಾಗವಹಿಸಿದ್ದ ದೇವಪ್ಪ ಕಲ್ಲನವರ ಬ್ಲಾಕ್ ಬೆಲ್ಟ್ 3 ಡಾನ್, ತಿರುಮಲ ಕಲ್ಲನವರ ಬ್ಲಾಕ್ ಬೆಲ್ಟ್ 1 ಡಾನ್ ಮತ್ತು ರೇಣುಕಾ ಕಲ್ಲನವರ ಬ್ಲಾಕ್ ಬೆಲ್ಟ್ 1 ಡಾನ್ ಪಡೆದುಕೊಂಡಿದ್ದು ಅವರಿಗೆ ಓಖಏಂಖ ಸಂಸ್ಥೆಯ ಮುಖ್ಯಸ್ಥರಾದ ಶಿಹಾನ್ ಸಂಜಯ ಇಂಗೋಲೆ ರವರು ಬ್ಲಾಕ್ ಬೆಲ್ಟ್ ಗಳನ್ನು ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಓಖಏಂಖ ಕರ್ನಾಟಕದ ಅಧ್ಯಕ್ಷರಾದ ಶನ್‌ಸಾಯ್ ಡಿ, ಬಾಷಾ ಸಾಹೇಬ್ ಉಪಸ್ಥಿತರಿದ್ದರು.

ಬ್ಲಾಕ್ ಬೆಲ್ಟ್ ಪಡೆದ ತರಬೇತುದಾರರಿಗೆ ಧರ್ಮದರ್ಶಿ ರಾಮಣ್ಣ ಕಲ್ಲನವರ, ಮುಖಂಡರಾದ ಯಮನೂರಪ್ಪ ನಾಯಕ, ರಾಜಬಕ್ಷಿ ಎಚ್, ವಿ ಸೇರಿದಂತೆರ ವಿದ್ಯಾರ್ಥಿಗಳು ಶುಭಕೋರಿದ್ದಾರೆ.

# ಡಿಪ್ಲೋಮಾ ಕೋರ್ಸುಗಳಿಗೆ ಪ್ರವೇಶಾತಿಗೆ ಅರ್ಜಿ ಆಹ್ವಾನ

ವಿಜಯನಗರ (ಹೊಸಪೇಟೆ): ಹರಪನಹಳ್ಳಿ ತಾಲೂಕಿನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಪ್ರಸಕ್ತ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳನ್ನು ಮೆರಿಟ್ ಹಾಗೂ ರೋಸ್ಟರ್ ಅನುಗುಣವಾಗಿ ಡಿಪ್ಲೋಮಾ ಪ್ರಥಮ ಸೆಮಿಸ್ಟರ್‌ಗೆ ಪ್ರವೇಶ ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿಗೆ ಬೇಟಿ ನೀಡಬಹುದು ಅಥವಾ ಕಾಲೇಜಿನ ಪ್ರಾಚಾರ್ಯರ ದೂರಾವಣಿ ಸಂಖ್ಯೆ: 9342384217 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಹೇಮರೆಡ್ಡಿ ಮಲ್ಲಮ್ಮ ಹಾಗೂ ಅಕ್ಕಮಹಾದೇವಿ ಆಧ್ಯಾತ್ಮಿಕ ಕ್ಷೇತ್ರದ ಅನರ್ಘ್ಯ ರತ್ನಗಳು



**ಬೆಳಗಾವಿ ವಾರ್ತೆ ವಿಜಯಪುರ:** 12ನೇ ಶತಮಾನದ ವಚನಗಾರ್ತಿ, ಸಮಾಜದ ಮೌಢ್ಯಗಳನ್ನು ಕಿತ್ತೆಸೆದ ಮೊದಲ ಕವಯಿತ್ರಿ ಅಕ್ಕಮಹಾದೇವಿ ಹಾಗೂ ಕಷ್ಟದಲ್ಲೂ ಎಲ್ಲರ ಒಳಿತನ್ನೇ ಬಯಸಿದ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಇವರೀರ್ವರೂ ಆಧ್ಯಾತ್ಮದ ಮಹಾನ್ ರತ್ನಗಳು ಎಂದು ಇಂಡಿಯ ಕರ್ನಾಟಕ ಟೀಚರ್ಸ್ ಬಿ.ಇಡಿ ಕಾಲೇಜಿನ ಪ್ರಾಚಾರ್ಯೆ ಡಾ. ಸುಧಾ ಸುಣಗಾರ ಅಭಿಪ್ರಾಯಪಟ್ಟರು.

ರವಿವಾರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಜರುಗಿದ ದಿ. ಗೌರವ್ವ ಗುರುಬಸಪ್ಪ ಮೋಟಗಿ ಹಾಗೂ ದಿ. ಗುರುಬಸಪ್ಪ ಭೂಬಾನು ಮೋಟಗಿ ದತ್ತಿ ಲಿಂ.ರಾಜೇಶ್ವರಿ ಸಿದ್ದಯ್ಯ ಕರ್ಪೂರಮಠ ದತ್ತಿ ಹಾಗೂ ಲಿಂ ನಿಂಗಮ್ಮ ಅಡಿವೆಪ್ಪ ಮುರಗಿ ಇವರ ಸ್ಮರಣಾರ್ಥ ದತ್ತಿ ಹಾಗೂ ದಿ. ರಾಯನಗೌಡ ಮ ಪಾಟೀಲ ದತ್ತಿ. ಹೀಗೆ ವಿವಿಧ ದತ್ತಿಗೋಷ್ಠಿಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ಶ್ರೀಶೈಲ ಮಲ್ಲಿಕಾರ್ಜುನನ್ನು ಆರಾಧಿಸಿ ಅವನನ್ನು ಸಾಕ್ಷಾತ್ಕರಿಸಿಕೊಂಡ ಮಹಾನ್ ಸಾಧ್ವಿ ಹೇಮರೆಡ್ಡಿ ಮಲ್ಲಮ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಜಯಪುರದ ಸರಕಾರಿ ಪ್ರಥಮ ದರ್ಜೆಮಹಿಳಾ ಮಹಾವಿದ್ಯಾಲಯದ ಪ್ರಾಧ್ಯಾಪಕಿ ಡಾ. ಲಕ್ಷ್ಮೀ ಮೋರೆ ಮಾತನಾಡಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅತ್ಯಂತ ಅರ್ಥಪೂರ್ಣವಾಗಿ ದತ್ತಿಗೋಷ್ಠಿ ನಡೆಸುತ್ತಿರುವುದು ನಮಗೆಲ್ಲ ಹೆಮ್ಮೆ ತರುವ ಅಭಿಮಾನದ ಸಂಗತಿ ಎಂದು ಅಭಿಪ್ರಾಯಪಟ್ಟರು.

ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮಳ ಕುರಿತು ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಸಾಹಿತಿ ಶಾಂತಲಾ ಪಾಟೀಲ, ಶ್ರೀಶೈಲ ಮಲ್ಲಿಕಾರ್ಜುನನ ಪರಮಭಕ್ತೆಯಾಗಿ ಹಲವಾರು ಪವಾಡಗಳನ್ನು ಮಾಡುವ ಮೂಲಕ ನಮ್ಮ ರೆಡ್ಡಿ ಕುಲಕ್ಕೆ ಎಂದಿಗೂ ಬಡತನ ಬಾರದಿರಲಿ ಎಂದು ಕೇಳಿಕೊಂಡ ಆಧ್ಯಾತ್ಮಿಕ ರತ್ನವಾಗಿ ಹೊರಹೊಮ್ಮಿದ್ದಾಳೆ ಎಂದರು.

ಶಿವಶರಣೆ ಅಕ್ಕಮಹಾದೇವಿಯ ಆಧ್ಯಾತ್ಮಿಕ ಜೀವನದ ಕುರಿತು ಉಪನ್ಯಾಸ ನೀಡಿದ ಪ್ರವಚನಕಾರರು ಹಾಗೂ ಶಿಕ್ಷಕಿಯಾದ ಸುಖದೇವಿ ಅಲಬಾಳಮಠ ಮಾತನಾಡಿ, ಅಕ್ಕಮಹಾದೇವಿ ಕೇವಲ ಒಬ್ಬ ಕವಯಿತ್ರಿಯಾಗದೇ ಮಹಿಳಾ ಸ್ವಾತಂತ್ರ್ಯ ಮತ್ತು ಭಕ್ತಿಯ ಸಂಕೇತವಾಗಿ ಹೊರಹೊಮ್ಮಿದ ವೈರಾಗ್ಯದ ನಿಧಿ ಅಕ್ಕಮಹಾದೇವಿಯ ಆಧ್ಯಾತ್ಮಿಕ ಜೀವನದ ಅನೇಕ ನಿದರ್ಶನಗಳು ನಮ್ಮೆಲ್ಲರ ಬದುಕಿಗೆ ಪ್ರೇರಣೆ ನೀಡುವಲ್ಲಿ ಸಹಾಯಕವಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ರಾಜೇಶ್ವರಿ ಮೋಪಗಾರ, ಜಗದೀಶ ಪಟ್ಟಣಶೆಟ್ಟಿ, ಶೈಲಶ್ರೀ ಪಟ್ಟಣಶೆಟ್ಟಿ, ಮುಂತಾದವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಲಲಿತಕಲಾ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಶಶಿಕಲಾ ಹೂಗಾರ ಅವರನ್ನು

ವಿಶೇಷವಾಗಿ ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಹಿರಿಯ ಸಾಹಿತಿ ರಾ.ಶಿ.ವಾಡೇದ ಅವರು ಬರೆದ "ಮಿಂಚು" ಎಂಬ ಕೃತಿಯನ್ನು ಬಿಡುಗಡೆಗೊಳಿಸಲಾಯಿತು. ಅನಸೂಯಾ ಬಡಿಗೇರ ಪ್ರಾರ್ಥಿಸಿದರು. ರಿಯಾಜ ಪಿಂಜಾರ ಸ್ವಾಗತಿಸಿ

ಗೌರವಿಸಿದರು. ಡಾ.ಮಾಧವ ಗುಡಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಶಿಲ್ಪಾ ಭಸ್ಮೆ ನಿರೂಪಿಸಿದರು. ಶೋಭಾ ಬಡಿಗೇರ ವಂದಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ, ರಾ.ಶಿ. ವಾಡೇದ, ಲತಾ ವಾಲಿಕಾರ, ಗಂಗಮ್ಮ ರಡ್ಡಿ, ಡಿ.ಬಿ. ಬಿರಾದಾರ, ಕೃಷ್ಣಾಜಿ ಕುಲಕರ್ಣಿ, ಯುವರಾಜ ಚೋಳಕೆ, ರವಿ ಕಿತ್ತೂರ, ಕೆ.ಎಸ್ ಹಣವಾಣೆ, ವಾಯ್.ಸಿ.ಮಯೂರ, ಶಾಂತು ರಾಣಾಗೋಳ, ಕಲ್ಪನಾ ಬಾಬಕರ, ಪ್ರಕಾಶ ಬಡಿಗೇರ, ಬಿ.ಎಂ. ಹೂಗಾರ, ಶಂಕ್ರಮ್ಮ ಹೂಗಾರ, ಅನಸೂಯಾ ಬಡಿಗೇರ, ದ್ರಾಕ್ಷಾಯಣಿ ಇಮನಾದ, ಬಸವರಾಜ ಹೂಗಾರ, ಮಹಾದೇವ ಮೋಪಗಾರ, ಶಿವಾಜಿ ಮೋರೆ, ಭಾಗಿರಥಿ ಸಿಂಧೆ, ಪ್ರಿಯಾಂಕಾ ಜಮಾದಾರ, ಅರ್ಜುನ ಶಿರೂರ, ರಾಜೇಶ್ವರಿ ಕೌಲಗಿ, ಮುಂತಾದವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಚಿತ್ರದುರ್ಗದ ಉಸ್ತುವಾರಿ ಸಚಿವ ಡಿ. ಸುಧಾಕರ ಹಾಗೂ ವಿಜಯಪುರ ಪಟ್ಟಣದ ಶರಣೆ ಶ್ಯಾಮಲಾ ಗುರುಬಸಪ್ಪ ಗಣ್ಣೂರ ದೈವಾಧೀನರಾದ ಪ್ರಯುಕ್ತ ಕಸಾಪದಲ್ಲಿ ಶೃದ್ಧಾಂಜಲಿ ಸಲ್ಲಿಸಲಾಯಿತು.

# ಮಲ್ಲಮ್ಮಳ ಆದರ್ಶ ಸರ್ವರಿಗೂ ಅನುಕರಣಿಯ



**ಬೆಳಗಾವಿ ವಾರ್ತೆ ತಾಳಿಕೋಟೆ:** ಶ್ರೀಶೈಲ ಮಲ್ಲಿಕಾರ್ಜುನನ ಪರಮಭಕ್ತೆಯಾಗಿದ್ದ ಹೇಮರಡ್ಡಿ ಮಲ್ಲಮ್ಮ ಜೀವನದಲ್ಲಿ ಹೇಳಿಕೊಳ್ಳಲು ಆಗದಷ್ಟು ಕಷ್ಟಗಳನ್ನು ಅನುಭವಿಸಿದರೂ ಅವುಗಳನ್ನು ಸಂತೋಷದಿಂದ ಸ್ವೀಕರಿಸಿ ಸಮಾಜಕ್ಕೆ ಮಾದರಿಯಾಗಿ ಜೀವನ ನಡೆಸಿದವರು ಮಹಾನ್ ಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಅವರು ಆಗಿದ್ದಾರೆಂದು ಎಂದು ವಿನಾಯಕ ಇಂಟರ್ನ್ಯಾಷನಲ್ ಸ್ಕೂಲ್ ಅಧ್ಯಕ್ಷ ಸಂಗಮೇಶ ದೇಸಾಯಿ ಹೇಳಿದರು.

ತಾಲೂಕಾಡಳಿತದ ವತಿಯಿಂದ ರವಿವಾರರಂದು ತಹಸಿಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ಆಯೋಜಿಸಿದ್ದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದ ಅವರು ಬಸವಣ್ಣನವರ ತತ್ವಗಳನ್ನು ಮೈಗೂಡಿಸಿಕೊಂಡು ಆ ಪರಂಪರೆಯಲ್ಲಿ ನಡೆದು ಬಂದ ಮಲ್ಲಮ್ಮ ಅವರು ಮೊದಲು ಸಂಸಾರವನ್ನು ತಿದ್ದಿ ಇಡೀ ಸಮಾಜವನ್ನು ತಿದ್ದುವ ಕೆಲಸ ಮಾಡಿದರು. ಸಂಪತ್ತು ಬಂದಾಗ ಅಹಂಕಾರ ಪಡದೆ ಬಡವರ ಸಂಕಷ್ಟಗಳಿಗೆ ಸ್ಪಂದಿಸುವ ಕೆಲಸ ಮಾಡಬೇಕು ಎಂದು ಅವರು ತಿಳಿಸಿದ್ದಾರೆ. ಅವರ ಪಾವನ ಜೀವನ ನಮಗೆ ದಾರಿದೀಪವಾಗಿದೆ ಅವರ ಆದರ್ಶ ಎಲ್ಲರಿಗೂ ಅನುಕರಣಿಯವಾಗಿದೆ ಮೈಗೂಡಿಸಿಕೊಂಡು ಸಾಗಬೇಕೆಂದರು.

ಕಾರ್ಯಕ್ರಮದಲ್ಲಿ ಪಿಎಸ್ಐ ಜ್ಯೋತಿ ಖೋತ, ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ ದಮ್ಮೂರಮಠ, ಸಿ.ಆರ್.ಸಿ.ರಾಜು ವಿಜಾಪುರ, ರೆಡ್ಡಿ ಸಮಾಜದ ಮುಖಂಡರಾದ ಜಿ.ಜಿ. ಮದರಕಲ್ಲ, ಬಿ.ಎನ್. ಹಿಪ್ಪರಗಿ, ಸಿದ್ದನಗೌಡ ಪಾಟೀಲ (ನಾವದಗಿ), ಪ್ರಭುಗೌಡ ಮದರಕಲ್ಲ, ಸಿದ್ದನಗೌಡ ಮಂಗಳೂರ, ರವಿ ಪಾಟೀಲ, ಶರಣಗೌಡ ಇಬ್ರಾಹಿಂಪೂರ, ಎಚ್.ಬಿ.ಗೂಗಲ್, ಸಂಗನಗೌಡ ಅಸ್ಕಿ, ಬಿ.ಆರ್.ಪೊಲೀಸ್ ಪಾಟೀಲ, ಶಾಂತಗೌಡ ಕೇಸರಭಾವಿ(ಕೊಣ್ಣೂರ), ಸುಭಾಸ ಗುರಡ್ಡಿ, ಚಿದಾನಂದ ಕವಡಿಮಟ್ಟಿ, ಎಂ.ಎಲ್. ಹಂದ್ರಾಳ, ಹಣಮಂತ್ರಾಯಗೌಡ ದೇಟ ಮನಿ, ಪ್ರವೀಣ ರೆಡ್ಡಿ, ವಿವಿಧ ಇಲಾಖೆಗಳ ಸಿಬ್ಬಂದಿಗಳಾದ ಬಸನಗೌಡ ಚೌಧರಿ, ಮಹಾಂತಗೌಡ ದೊರೆಗೋಳ, ಮುನ್ನಾ ಅತ್ತಾರ, ಸಿದ್ದಲಿಂಗಯ್ಯ ಚೊಂಡಿಪಾಟೀಲ, ಶ್ರೀಪಾದ ಜೋಶಿ, ರಾಜು ಮೂಕಿಹಾಳ ಮೊದಲಾದವರು ಉಪಸ್ಥಿತರಿದ್ದರು.



**ಬೆಳಗಾವಿ ವಾರ್ತೆ ಗೋಕಾಕ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಶ್ರಯದಲ್ಲಿ ಶ್ರೀ ಪಂಚಲಿಂಗೇಶ್ವರ ನಾಟ್ಯ ಸಂಘದವರು ಹಮ್ಮಿಕೊಂಡ "ಸಂದಿಮನಿ ಸಂಗವ್ವ" ನಾಟಕ ಪ್ರದರ್ಶನದಲ್ಲಿ ಪ್ರಖ್ಯಾತ ರಂಗ ಕಲಾವಿದರಾದ ದಯಾನಂದ ಬಿಳಗಿ ಹಾಗೂ ಸ್ವೇತಾ ಬಿಳಗಿ ಅವರನ್ನು ಕಲಾವಿಭಿಮಾನಿಗಳು ದಿ.10ರಂದು ನಗರದ ಚಿತ್ರಾ ಟಾಕೀಸ್ ಸಭಾಭವನದಲ್ಲಿ ಸತ್ಕರಿಸಿದರು.

ಈ ಸಂದರ್ಭದಲ್ಲಿ ತಹಶೀಲದಾರ ಡಾ.ಮೋಹನ ಭಸ್ಮೆ, ಅಶೋಕ ಪೂಜಾರಿ, ಮಹಾಂತೇಶ ತಾಂವಶಿ, ರಜನಿ ಜಿರಗ್ಯಾಳ, ಚಂದ್ರಶೇಖರ ಕೊಣ್ಣೂರ, ಮನೋಹರ ಗಡಾದ, ಚಂದನ ಮಗದುಮ, ಹಿರಿಯ ಕಲಾವಿದ ಹನುಮಂತಪ್ಪ ಬಾಗಲಕೋಟ ಇದ್ದರು.

# ಅರ್ಜಿ ಆಹ್ವಾನ

ವಿಜಯನಗರ (ಹೊಸಪೇಟೆ): ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಡಾನ್ ಬೋಸ್ಕೊ ಸಂಸ್ಥೆ ಸಹಯೋಗದಲ್ಲಿ ಕಾರ್ಯನಿರ್ವ ಹಿಸುತ್ತಿರುವ ಗ್ರಾಮೀಣ ಬಾಲಕಿಯರ ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ನಗರದ ಜಂಬುನಾಥ ರಸ್ತೆಯಲ್ಲಿರುವ ಗ್ರಾಮೀಣ ಬಾಲಕಿಯರ ವಸತಿ ನಿಲಯ ಪ್ರವೇಶಕ್ಕೆ ಆರನೇ ತರಗತಿಯಿಂದ ದ್ವಿತೀಯ ಪಿಯುಸಿವರೆಗೆ ಖಾಲಿ ಉಳಿದ 14 ಸ್ಥಾನಗಳಿಗೆ ಆಸಕ್ತ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಪ್ರವೇಶ ಬಯಸುವ ಆಸಕ್ತ ವಿದ್ಯಾರ್ಥಿನಿಯರು ಆಧಾರ್ ಕಾರ್ಡ್ (ವಿದ್ಯಾರ್ಥಿನಿ, ಪೋಷಕರು), 2 ಫೋಟೋ , ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ಅಗತ್ಯ ದಾಖಲಾತಿಯೊಂದಿಗೆ ನಿಗದಿತ ಅರ್ಜಿ ನಮೂನೆ ಪಡೆದು ಭರ್ತಿ ಮಾಡಿ ಸಲ್ಲಿಸಬಹುದು. ಗ್ರಾಮೀಣ ಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೂದಿಹಾಳ– ಪೀರಾಪೂರ ಏತ ನೀರಾವರಿ ಯೋಜನೆ ನೆನೆಗುದಿಗೆ: ರೈತ ಸಂಘ ಆಕ್ರೋಶ



**ಬೆಳಗಾವಿ ವಾರ್ತೆ ವಿಜಯಪುರ:** ಬೂದಿಹಾಳ : ಪೀರಾಪೂರ ಏತ ನೀರಾವರಿ ಯೋಜನೆಯ ಬಾಕಿ ಉಳಿದ ಕಾಮಗಾರಿ ನೆನೆಗುದಿಗೆ ಬಿದ್ದಿದ್ದು ಧರಣಿ ಸಂದರ್ಭದಲ್ಲಿ ನೀಡಿದ ಭರವಸೆ ಕೇವಲ ಮೂಗಿಗೆ ತುಪ್ಪ ಸವರಿ ಹೋದಂತಾಗಿದೆ. ಅವರು ಕೊಟ್ಟ ಮಾತು ಉಳಿಸಿಕೊಳ್ಳಲು ವಿಫಲರಾಗಿದ್ದಾರೆ. ಇವರು ಕೇವಲ ಭರವಸೆ ನೀಡುತ್ತಾ ರೈತರಿಗೆ ದಿಕ್ಕು ತಪ್ಪಿಸುತ್ತಿದ್ದಾರೆ ಎಂದು ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಹಾಗೂ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಗುರುರಾಜ ಪಡಶೆಟ್ಟಿ ಸಚಿವರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಜಂಟಿ ಸುದ್ದಿಗೋಷ್ಠಿಯಲ್ಲಿ ಅಸಮಾಧಾನ ಹೊರಹಾಕಿದ ಉಭಯ ರೈತ ಮುಖಂಡರು ಯೋಜನೆಗೆ ಸಂಬಂಧಿಸಿದ ಪೀರಾಪೂರ ಏತ ನೀರಾವರಿ ಯೋಜನೆ ಬಾಕಿ ಉಳಿದ ಕಿರು ಕಾಲುವೆ (ಎಫ್.ಐ.ಸಿ) ಕಾಮಗಾರಿಯನ್ನು ಶೀಘ್ರದಲ್ಲಿ ಮುಕ್ತಾಯಗೊಳಿಸಿ ಪ್ರತಿಯೊಬ್ಬ ರೈತನ ಜಮೀನಿಗೆ ನೀರು ಒದಗಿಸಬೇಕು ಎಂದು ಆಗ್ರಹಿಸಿ ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ಕಳೆದ 2025 ರಿಂದ ತಾಳಿಕೋಟೆ ತಾಲೂಕಿನ ಕೊಡಗಾನೂರ ಕ್ರಾಸ್ ಬಳಿ 38 ಹಳ್ಳಿಗಳ ರೈತರೊಂದಿಗೆ 12 ದಿನಗಳವರೆಗೆ ಧರಣಿ ಹಮ್ಮಿಕೊಳ್ಳಲಾಗಿತ್ತು. ಧರಣಿ ಸ್ಥಳಕ್ಕೆ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲರು ಆಗಮಿಸಿ ಬೂದಿಹಾಳ–ಪೀರಾಪೂರ ಏತ ನೀರಾವರಿ ಯೋಜನೆ ಶೀಘ್ರದಲ್ಲಿ ಮುಕ್ತಾಯಗೊಳಿಸಲಾಗುವದೆಂದು ಧರಣಿ ನಿರತ ರೈತರಿಗೆ ಮಾತು ಕೊಟ್ಟಿದ್ದರು. ಕೊಟ್ಟ ಮಾತಿನಂತೆ ನಡೆದುಕೊಳ್ಳದೆ ಮೌನವಾಗಿದ್ದಾರೆ ಎಂದರು.

ತಾಳಿಕೋಟೆ ಭಾಗದ ಅಸ್ಕಿ, ನೀರಲಗಿ, ಬೆಕಿನಾಳ, ಜಲಪೂರ, ಬೆನ್ನಟ್ಟಿ, ಬೂದಿಹಾಳ, ಹಾಳಗುಂಡಕನಾಳ, ರಾಂಪೂರ, ವಣಕಿಹಾಳ, ತುರಕನಕೇರಿ ಸೇರಿ 38 ಗ್ರಾಮಗಳಲ್ಲಿ ನೀರಿನ ಭವಣೆ ಗಂಭೀರವಾಗಿದೆ. ಜನ ಹಾಗೂ ಜಾನುವಾರುಗಳಿಗೆ ಕುಡಿಯಲು ನೀರು ಇಲ್ಲದಂತಾಗಿವೆ. ಕೃಷಿಗೂ ಕೂಡ ನೀರಿಲ್ಲ. ಅಂದಾಜು 4–5 ಕಿಲೋ ಮೀಟರ್ ವರೆಗೆ ನೀರು ಇದ್ದಲ್ಲಿ ಹುಡುಕಿಕೊಂಡು ಹೋಗಿ ನೀರು ತರುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಸಿದ್ದಾಪೂರ ಈ ಯೋಜನೆ ಪೂರ್ಣಗೊಂಡರೆ 50,657 ಎಕರೆ ಜಮೀನು ನೀರಾವರಿಗೆ ಒಳಪಡುತ್ತದೆ. ಹಿಂದಿನ ಸರ್ಕಾರದಲ್ಲಿ ಮುಖ್ಯಮಂತ್ರಿಯಾಗಿದ್ದ ಬಸವರಾಜ ಬೊಮ್ಮಾಯಿಯವರು ಈ ಯೋಜನೆಯ 1ನೇ ಹಂತದ ಉದ್ಘಾಟನೆ ಮಾಡಿ 2ನೇ ಹಂತದ ಶಂಕು ಸ್ಥಾಪನೆ ನೆರವೇರಿಸಿದ್ದರು. ಆದರೆ ಇಲ್ಲಿಯ ವರೆಗೂ ಕಾಮಗಾರಿ ಪೂರ್ಣಗೊಳ್ಳಲಿಲ್ಲ. ಈಗಾಗಲೇ ಶೇ.90 ರಷ್ಟು ಕಾಮಗಾರಿ ಪೂರ್ಣಗೊಂಡಿದೆ. ಇನ್ನು ಕೇವಲ ಸ್ವಲ್ಪ ಶೇ. 10ರಷ್ಟು ಪ್ರಮಾಣದಲ್ಲಿ ಕಾಮಗಾರಿ ಉಳಿದಿದ್ದು ಕೇವಲ ಅದಕ್ಕೆ 200 ಕೋಟಿ ಅನುದಾನದ ಅವಶ್ಯಕತೆ ಇದೆ. 38 ಹಳ್ಳಿಗಳಿಗೆ 40 ರಿಂದ 80 ಎಕರೆಗೆ 1ರಂತೆ ಔಟಲೆಟ್ ಕೂಡಿಸಿದ್ದಾರೆ. ಒಟ್ಟು 1200 ಔಟ್‌ಲೆಟ್ ಬಾಕ್ಸ್ ಗಳನ್ನು ಜಮೀನಿನಲ್ಲಿ ಅಳವಡಿಸಲಾಗಿದೆ. ಇನ್ನು ಬಾಕಿ ಉಳಿದ ಕಾಮಗಾರಿ ಮುಕ್ತಾಯಗೊಳಿಸಲು 200 ಕೋಟಿ ಹಣ ಸರ್ಕಾರಕ್ಕೆ ಏನು ಹೊರೆಯಲ್ಲ. ಆದ ಕಾರಣ ಕೂಡಲೇ ಅನುದಾನ ಬಿಡುಗಡೆ ಮಾಡಿ ಬಾಕಿ ಉಳಿದ ಕಾಮಗಾರಿ ಮುಕ್ತಾಯಗೊಳಿಸಬೇಕು ಇಲ್ಲದಿದ್ದರೆ ಮತ್ತೆ ತಾಳಿಕೋಟಿ ಹಾಗೂ ದೇವರ ಹಿಪ್ಪರಗಿ ಮತಕ್ಷೇತ್ರದ ವ್ಯಾಪ್ತಿಗೆ ಬರುವ 38 ಹಳ್ಳಿಗಳ ರೈತರೊಂದಿಗೆ ಸಭೆ ಸೇರಿ ಅಹೋರಾತ್ರಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಬೇಕಾಗುತ್ತದೆ ಎಂದರು.

ರೈತ ಮುಖಂಡರಾದ ಎಂ.ಜಿ. ಯಂಕಂಚಿ ಮಾತನಾಡಿದರು.

ಜಿಲ್ಲಾ ಸಂಚಾಲಕ ಪಾಂಡು ಹ್ಯಾಟಿ, ಬಸವನ ಬಾಗೇವಾಡಿ ತಾಲೂಕಾ ಉಪಾಧ್ಯಕ್ಷ ಹೊನಕೇರೆಪ್ಪ ತೆಲಗಿ, ಕರ್ನಾಟಕ ರಾಜ್ಯ ರೈತ ಸಂಘದ ವಿಜಯಪುರ ತಾಲೂಕಾಧ್ಯಕ್ಷ ಮಹಾ ದೇವಪ್ಪ ತೇಲಿ, ಶ್ರೀಶೈಲ ತಾಳಿಕೋಟಿ, ದತ್ತಾತ್ರೆಯ ಕುಲಕರ್ಣಿ, ಅರವಿಂದ ತೇಲಿ, ಗುರುನಾಥ ಬಾಗೇವಾಡಿ ಉಪಸ್ಥಿತರಿದ್ದರು.

# ಎಲ್ಲರ ಸಹಭಾಗಿತ್ವದಲ್ಲಿ ಸಮಾಜಮುಖಿ ಕೆಲಸ ಸಾಗಲಿ




**ಬೆಳಗಾವಿ ವಾರ್ತೆ ತಾಳಿಕೋಟೆ:** ಬಾವೂರು ಶಾಂತಿ ಸೌಹಾರ್ದತೆಗೆ ಹೆಸರುವಾಸಿಯಾದ ಗ್ರಾಮವಾಗಿದೆ. ಟ್ರಸ್ಟನ ಸದಸ್ಯರ ಮೇಲೆ ಹೆಚ್ಚಿನ ಜವಾಬ್ದಾರಿ ಇದೆ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಈ ಗ್ರಾಮವನ್ನು ಜಿಲ್ಲೆಯ ಒಂದು ಮಾದರಿ ಗ್ರಾಮವನ್ನಾಗಿ ಮಾಡಲು ಪ್ರಯತ್ನಿಸಿ ಎಂದು ಅಸ್ಕಿ ಪೌಂಡೇಶನ್ ಅಧ್ಯಕ್ಷ ಸಮಾಜ ಸೇವಕ ಕಾಂಗ್ರೇಸ್ ಮುಖಂಡ ಸಿ.ಬಿ.ಅಸ್ಕಿ(ಕೊಣ್ಣೂರ) ಅವರು ಹೇಳಿದರು.

ತಾಲೂಕಿನ ಬಾವೂರ ಗ್ರಾಮದಲ್ಲಿ ರವಿವಾರರಂದು ಹಮ್ಮಿಕೊಂಡ ಅಂಜುಮನ್ ಇಸ್ಲಾಂ ಟ್ರಸ್ಟ್ ಉದ್ಘಾಟನೆ ಹಾಗೂ ಸಮುದಾಯ ಭವನ ಅಡಿಗಲ್ಲು ಸಮಾರಂಭಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಎಲ್ಲರೂ ಒಗ್ಗೂಡಿಕೊಂಡು ಟ್ರಸ್ಟನ್ನು ರಚಿಸಿಕೊಂಡು ಎಲ್ಲರ ಸಹಭಾಗಿತ್ವದಲ್ಲಿ ಸಮಾಜಮುಖಿ ಕೆಲಸಕ್ಕೆ ಮುಂದಾಗಿರುವದು ಶ್ಲಾಘನೀಯವಾಗಿದೆ ಎಂದ ಅವರು ಈ ಸಮುದಾಯ ಭವನದ ನಿರ್ಮಾಣಕ್ಕೆ ಅಸ್ಕಿ ಫೌಂಡೇಶನ್ ವತಿಯಿಂದ ಸುಮಾರು 200 ಚೀಲ ಸೀಮೆಂಟ್ ಉಚಿತವಾಗಿ ಒದಗಿಸುವದಾಗಿ ಘೋಷಿಸಿದರು.

ಸಮಾರಂಭವನ್ನು ಜ್ಯೋತಿ ಬೆಳಗಿಸುವದರೊಂದಿಗೆ ಉದ್ಘಾಟಿಸಿದ ಕೆಪಿಸಿಸಿ ಮಹಿಳಾ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಪಲ್ಲವಿ ನಾಡಗೌಡ ಅವರು ಮಾತನಾಡಿ ಸಮಾಜದಲ್ಲಿರುವ ಎಲ್ಲ ರೀತಿಯ ಕೆಡುಕುಗಳನ್ನು ನಿರ್ಮೂಲನೆಗೊಳಿಸಿ ಎಲ್ಲ ವರ್ಗದ ಜನರ ಮಧ್ಯೆ ಪ್ರೀತಿ ವಿಶ್ವಾಸ ಹಾಗೂ ಭ್ರಾತೃತ್ವವನ್ನು ಬೆಳೆಸುವುದು ಸಂಘಟನೆಗಳ ಸಾಮಾಜಿಕ ಜವಾಬ್ದಾರಿಯಾಗಿದೆ ಸಮಾಜದ ಸರ್ವಾಂಗೀಣ ಅಭಿವೃದ್ಧಿ ಶಿಕ್ಷಣದಿಂದ ಮಾತ್ರ ಸಾಧ್ಯ. ಹೆತ್ತವರು ತಮ್ಮ ಮಕ್ಕಳ ಶಿಕ್ಷಣ ಹಾಗೂ ಸಂಸ್ಕಾರಕ್ಕೆ ಹೆಚ್ಚು ಒತ್ತು ನೀಡಬೇಕು. ಇತ್ತೀಚಿಗೆ ಗ್ರಾಮದಲ್ಲಿ ಯುವಕರು ಕುಡಿತಕ್ಕೆ ಹೆಚ್ಚು ಬಲಿಯಾಗುತ್ತಿದ್ದಾರೆ ಅವರನ್ನು ಸರಿದಾರಿಗೆ ತರುವ ಕೆಲಸ ಟ್ರಸ್ಟ್ ಸದಸ್ಯರು ಮಾಡಬೇಕು. ಗ್ರಾಮದ ಶಾಂತಿ ಕೆಡದಂತೆ ನೋಡಿಕೊಂಡು ನಾವೆಲ್ಲರೂ ಒಂದು ಎಂಬ ಭಾವನೆ ಯೊಂದಿಗೆ ಬದುಕಲು ಪ್ರಯತ್ನಿಸಿ ಎಂದರು.

ಗ್ರಾಮದ ಗಣ್ಯರಾದ ಎಚ್.ಎಸ್. ಪಾಟೀಲ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಟ್ರಸ್ಟನ ಸದಸ್ಯರು ಗ್ರಾಮದ ಹಿರಿಯರ ಸಲಹೆ ಸೂಚನೆಗಳನ್ನು ತೆಗೆದುಕೊಂಡು ಅವರ ಮಾರ್ಗದರ್ಶನದಲ್ಲಿ ಕೆಲಸ ಮಾಡಬೇಕು. ಟ್ರಸ್ಟ್ ಮೂಲಕ ಗ್ರಾಮದಲ್ಲಿ ಒಳ್ಳೆಯ ಕೆಲಸಗಳನ್ನು ಮಾಡಿ ಗ್ರಾಮದ ಕೀರ್ತಿ ತರಲು ಪ್ರಯತ್ನಿಸಬೇಕು ಇದಕ್ಕೆ ಎಲ್ಲ ರೀತಿಯ ಸಹಕಾರ ನೀಡಲಾಗುವುದು ಎಂದರು.

ತಾಳಿಕೋಟೆ ಮುಸ್ಲಿಂ ಧಾರ್ಮಿಕ ಮುಖಂಡ ಸೈಯದ್ ಶಕೀಲ ಅಹ್ಮದ್ ಖಾಜಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಗ್ರಾಮದ ಗಣ್ಯರಾದ ಆನಂದರಾಜ್ ದೇಶಮುಖ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಗಣ್ಯರಾದ ಶಾಂತಗೌಡ ಪಾಟೀಲ, ನಿಂಗನಗೌಡ ಬಿರಾದಾರ, ಮಲ್ಲನಗೌಡ ಬಳಗಾನೂರ, ಬಾಪ್ ಢವಳಗಿ, ರೆಹಮಾನಸಾಬ ಅವಟಿ, ಆಸೀಫ್ ತಾರಫರ, ಟ್ರಸ್ಟ್ ಅಧ್ಯಕ್ಷ ಬಸೀರ ಅಹ್ಮದ್ ಕಾಳಗಿ, ಉಪಾಧ್ಯಕ್ಷ ಬಸೀರ ಅಹ್ಮದ್ ಕಮತಗಿ, ಪ್ರಧಾನ ಕಾರ್ಯದರ್ಶಿ ಲಾಲಸಾಬ ನಿಡಗುಂದಿ, ಸಹ ಕಾರ್ಯದರ್ಶಿ ಮಹೆಬೂಬ ಕಮತಗಿ, ಖಜಾಂಚಿ ರಾಜಣ್ಣ ನಿಡಗುಂದಿ, ಸದಸ್ಯರಾದ ಇಬ್ರಾಹಿಂ ನಿಡಗುಂದಿ, ದಾವಲಸಾಬ ಕಾಳಗಿ, ಹಸನ್ ಖಾದ್ರಿ, ಬಂದೇನವಾಜ್ ನಿಡಗುಂದಿ, ಮುಸ್ತಫಾ ನಿಡಗುಂದಿ, ಹುಸೇನ್ ಜಮಾದಾರ, ನಬಿಸಾಬ ಕಮತಗಿ, ಸಾಧೀಕ ನಿಡಗುಂದಿ, ಮೋದಿನಸಾಬ, ರಿಯಾಜ ಹಾಗೂ ಗ್ರಾಮಸ್ಥರು ಇದ್ದರು. ಶಿಕ್ಷಕಿ ಶ್ರೀಮತಿ ಜಿ.ಜಿ. ತಾಳಿಕೋಟಿ ಸ್ವಾಗತಿಸಿ ನಿರೂಪಿಸಿದರು.

"ನೀರು ಗಾಳಿಗೆ ಇಲ್ಲದ ಜಾತಿ ವ್ಯವಸ್ಥೆ ನಮಗ್ಯಾಕೆ ಬೇಕು ಸಮಾಜಮುಖಿ ಕೆಲಸ ಮಾಡಲು ಬಾವೂರಿನ ಅಂಜುಮನ್ ಇಸ್ಲಾಂ ಟ್ರಸ್ಟ್ ಕಮಿಟಿಯ ಉದ್ಘಾಟಿಸುವದರೊಂದಿಗೆ ಮುಂದೆ ಸಾಗಿದ ಯುವಕರು ಎಲ್ಲರಿಗೂ ಮಾಡಲ್ ಆಗಿ ಬೆಳೆಯಲಿ ಬಾವೂರಿನ ಹೆಸರು ರಾಜ್ಯಮಟ್ಟದಲ್ಲಿ ಗುರುತಿಸುವಂತಹ ಕಾರ್ಯವಾಗಲಿ."

**ಶ್ರೀಮತಿ ಪಲ್ಲವಿ ನಾಡಗೌಡ**
**ಕೆಪಿಸಿಸಿ ಮಹಿಳಾ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ**

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001